ಸಂಪುಟ : 10 ಸಂಚಿಕೆ 14 ಪುಟ : 4+2 ಬೆಲೆ: 3.00 ರವಿವಾರ ಫೆಬ್ರವರಿ 9 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ




ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 14 Pages : 4+2 Price : 3.00 Sunday February 9 2025 Gadag RNI No : KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಸಹಜ ಶಿವಯೋಗ, ಸನ್ಮಾನ ಕಾರ್ಯಕ್ರಮ ಇಂದು



■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಫೆ. 9ರಂದು ಬೆಳಿಗ್ಗೆ 7.30ಕ್ಕೆ ನಡೆಯಲಿರುವ ಬಸವದಳದ 1632ನೇ ಶರಣ ಸಂಗಮದಲ್ಲಿ ಇಷ್ಟಲಿಂಗಯೋಗದ ಪ್ರಾತ್ಯಕ್ಷಿಕೆ, ಶರಣ ಮಡಿವಾಳ ಮಾಚಿದೇವರ ಕುರಿತು ಉಪನ್ಯಾಸ ಹಾಗೂ ಸಂಮಾನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಶರಣ ಸಾಹಿತ್ಯ ಚಿಂತಕ ಶರಣ ಎಸ್.ಎ. ಮುಗದ ಇವರು ಶಿವಯೋಗ ಪ್ರಾತ್ಯಕ್ಷಿಕೆ ನೀಡುವರು. ನಿವೃತ್ತ ಪ್ರಾಚಾರ್ಯ ಶರಣ ಎನ್.ಎಂ. ಪವಾಡಿಗೌಡ್ರ ಇವರು ಉಪನ್ಯಾಸ ಮಾಡುವರು.

ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

## ಕಳಸಾಪೂರ ಹುಡ್ಕೋ ನಿವೇಶನದಾರರ ಸಭೆ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಕಳಸಾಪುರ ಹುಡ್ಕೋ ನಿವೇಶನ ಪಡೆದ ಫಲಾನುಭವಿಗಳ ಸಭೆಯನ್ನು ಫೆ.9ರಂದು ಬೆಳಿಗ್ಗೆ 10.30ಕ್ಕೆ ಹುಡ್ಕೋ ಬಡಾವಣೆಯ ಆಂಜನೇಯ ಗುಡಿಯ ಹಿಂಭಾಗದಲ್ಲಿರುವ ಭಾರತ ಮಾತಾ ಉದ್ಯಾನವನದಲ್ಲಿ ಕರೆಯಲಾಗಿದೆ.

ಈ ಸಭೆಯಲ್ಲಿ ಹಿಂದಿನ ಸಭೆಯಲ್ಲಿ ನಿರ್ಣಯಿಸಿದ ಪ್ರಕಾರ ಸಂಘವು ಪ್ರಾರಂಭಿಸಿದ ಕಾರ್ಯ ಚಟುವಟಿಕೆಗಳನ್ನು ಗಮನಕ್ಕೆ ತಂದು ಮುಂದೆ ಅನುಸರಿಸಬೇಕಾದ ಕಾರ್ಯ ಚಟುವಟಿಕೆಗಳ ಬಗ್ಗೆ ಚರ್ಚಿಸಲಾಗುವುದು. ಸದಸ್ಯರು ಸಲಹೆ-ಸೂಚನೆ ನೀಡಬಹುದು ಮತ್ತು ತಮ್ಮ ದೂರವಾಣಿ ಸಂಖ್ಯೆ, ನಿವೇಶನದ ಸಂಖ್ಯೆಗಳನ್ನು ಸಂಘದ ರಜಿಸ್ಟರ್ ಪುಸ್ತಕದಲ್ಲಿ ನಮೂದಿಸಲು ಸಂಘದ ಪ್ರಧಾನ ಕಾರ್ಯದರ್ಶಿ ಪೊಲೀಸ್‌ಪಾಟೀಲ್-9036390839 ಇವರನ್ನು ಸಂಪರ್ಕಿಸಲು ಸಂಘದ ಅಧ್ಯಕ್ಷರಾದ ಡಾ. ಆರ್.ಎಚ್. ಕಬಾಡಿಯವರು ವಿನಂತಿಸಿದ್ದಾರೆ.

## ದಿ. ಕೆ.ಎಚ್. ಪಾಟೀಲರ ಪುಣ್ಯಸ್ಮರಣೆ ಇಂದು



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ದಿ. ಗದಗ ಕೋ-ಆಪ್ ಕಾಟನ್ ಸೇಲ್ ಸೊಸೈಟಿಯ ಆವರಣದಲ್ಲಿರುವ ಕೆ.ಎಚ್. ಪಾಟೀಲ ಅವರ ಪುತ್ಥಳಿಯ ಮುಂದೆ ಸಹಕಾರಿ ರಂಗದ ಭೀಷ್ಮ ದಿ. ಕೆ.ಎಚ್. ಪಾಟೀಲ ಅವರ 33ನೇ ಪುಣ್ಯಸ್ಮರಣೆ ಅಂಗವಾಗಿ ಪ್ರಾರ್ಥನಾ ಸಭೆಯನ್ನು ಫೆ. 9ರಂದು ಬೆಳಿಗ್ಗೆ 9ಕ್ಕೆ ಆಯೋಜಿಸಲಾಗಿದೆ.

ಅವರ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಕಾರ್ಯಕ್ರಮದ ಸಂಘಟಕರು ಪ್ರಕಟಣೆಯ ಮೂಲಕ ವಿನಂತಿಸಿದ್ದಾರೆ.

### ಟಿಪ್ಪರ್/ಲಾರಿಗಳ ಅಬ್ಬರಕ್ಕೆ ಬೆದರಿದ ಕುಂದ್ರಳ್ಳಿ ಗ್ರಾಮಸ್ಥರು । ವಾಹನ ತಡೆದು ಪ್ರತಿಭಟನೆ । ಸಂಚಾರ ಅಸ್ತವ್ಯಸ್ತ

# ಯಮ ಕಿಂಕರರಿವರು, ಜೀವ ಹಿಂಡುವರು!

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಓವರ್ ಲೋಡ್ ಟಿಪ್ಪರ್/ಲಾರಿಗಳ ಅಬ್ಬರಕ್ಕೆ ಬೆದರಿದ ಕುಂದ್ರಳ್ಳಿ ಗ್ರಾಮಸ್ಥರು ಶನಿವಾರ ಸಂಜೆ ಹತ್ತಾರು ಟಿಪ್ಪರ್‌ಗಳನ್ನು ತಡೆದು, 3-4 ಗಂಟೆಗಳ ಕಾಲ ರಸ್ತೆ ಸಂಚಾರ ಸಂಪೂರ್ಣ ಬಂದ್ ಮಾಡಿ ಪ್ರತಿಭಟನೆ ನಡೆಸಿದ ಘಟನೆ ಜರುಗಿತು.

ಈ ವೇಳೆ ಅಸಮಾಧಾನ ವ್ಯಕ್ತಪಡಿಸಿದ ಮಹಿಳೆಯರಾದ ಗಂಗವ್ವ ಮುಂದಿನಮನಿ, ಕರಿಯವ್ವ ಪೂಜಾರ ಮತ್ತಿತರರು ಹಲಗೂ-ರಾತ್ರಿ ಎನ್ನದೇ ಮರಳು, ಎಂ ಸ್ಯಾಂಡ್, ಖಡಿ ತುಂಬಿದ ಬಾರೀ ಗಾತ್ರದ ವಾಹನಗಳು ಸಂಚರಿಸುವುದರಿಂದ ಊರಿನ ಜನರಿಗೆ ನೆಮ್ಮದಿಯೇ ಇಲ್ಲದಂತಾಗಿದೆ. ಮೊದಲೇ ಎದುರು ವಾಹನ ಬಂದರೆ ಪಾರಾಗಿ ಹೋಗದಂತಹ ಅತ್ಯಂತ ಇಕ್ಕಟ್ಟಾದ ರಸ್ತೆ, ವಾಹನಗಳ ಶಬ್ದಕ್ಕೆ ನಿದ್ದೆಯೂ ಬರುವುದಿಲ್ಲ. ಧೂಳಿಗೆ ಎಲ್ಲರ ಆರೋಗ್ಯ ಹಾಳಾಗಿದೆ. ಯಮಸ್ವರೂಪಿ ವಾಹನ ಸಂಚಾರದಿಂದ ಮಕ್ಕಳು, ಹಿರಿಯರನ್ನು ಮನೆಯಿಂದ ಹೊರ ಕಳಿಸಲೂ ಭಯವಾಗುತ್ತದೆ. ಇದು ಇಂದು-ನಿನ್ನೆಯ ಸಮಸ್ಯೆಯಾಗಿದೇ ಹತ್ತಾರು ವರ್ಷಗಳಿಂದಲೂ ಅನುಭವಿಸುತ್ತಿದ್ದೇವೆ. ಈ ಬಗ್ಗೆ ತಹಸೀಲ್ದಾರ, ಪೊಲೀಸರು, ಗ್ರಾಮ ಪಂಚಾಯಿತಿ, ಜನಪ್ರತಿನಿಧಿಗಳು, ಆರ್‌ಟಿಓ ಸೇರಿ ಎಲ್ಲರೆದುರಿಗೂ ಅಳಲು ತೋಡಿಕೊಂಡಿದ್ದರೂ ನಮ್ಮ ಕೂಗು ಅರಣ್ಯರೋಧನವಾಗಿದೆ.



ಯಾರ ಭಯವೂ ಇಲ್ಲದೇ ಯರ್‍ರಾಬಿರ್‍ರಿ ಹೋಗುವ ವಾಹನದವರಿಗೆ ಹೇಳಿದರೆ ರಸ್ತೆ ಏನ್ ನಿಮ್ಮಪ್ಪಂದೇನು ಎಂದು ಜನರ ಮೇಲೆಯೇ ಎರಗುತ್ತಾರೆ. ಇವರಿಗೆ ರಾಜಕಾರಣಿಗಳು, ಅಧಿಕಾರಿಗಳ ಬಲವಿದ್ದು ನಮ್ಮ ಗೋಳು ಯಾರ ಮುಂದೆ ಹೇಳಬೇಕು ಎಂದು ನೊಂದು ನುಡಿದರು.

ಗ್ರಾ.ಪಂ ಸದಸ್ಯ ಮಂಜುನಾಥ ಗೌರಿ ಮಾತನಾಡಿ, ಇಕ್ಕಟ್ಟಾದ ರಸ್ತೆಯಲ್ಲಿ ನಿತ್ಯ 10-12 ಗಾಲಿಗಳುಳ್ಳ ಟಿಪ್ಪರ್, ಲಾರಿಗಳು ತುಂಗಭದ್ರಾ ನದಿ ಪಾತ್ರದಿಂದ ಮರಳು, ಸಮೀಪದ ಚಬ್ಬಿ, ದೇವಿಹಾಳ ಭಾಗದಿಂದ 40 ಟನ್ ಭಾರದ ಎಂ ಸ್ಯಾಂಡ್ ಸಾಗಿಸುತ್ತವೆ. ಪದೇ ಪದೇ ರಸ್ತೆ ರಿಪೇರಿ, ನೀರಿನ ಪೈಪ್‌ಲೈನ್ ದುರಸ್ತಿ ಮಾಡಿಸಿ ಸಾಕಾಗಿದೆ. ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೂ ತರಲಾಗಿದೆ. ಇವತ್ತು ಮುಳಗುಂದದಲ್ಲಿ ಚಿಕ್ಕ ಮಗುವಿನ ಮೇಲೆ ಟಿಪ್ಪರ್ ಹರಿದು ಹೋಗಿದೆ, ಗ್ರಾಮಸ್ಥರು ಭಯಭೀತರಾಗಿದ್ದಾರೆ. ಯಾವುದೇ ರೀತಿಯ ಅಪಾಯ ಸಂಭವಿಸುವ ಮೊದಲೇ ಅಧಿಕಾರಿಗಳು ಎಚ್ಚೆತ್ತುಕೊಂಡು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಗ್ರಾ.ಪಂ ಅಧ್ಯಕ್ಷರಾದ ಶಾಂತವ್ವ ಹಡಪದ, ಉಪಾಧ್ಯಕ್ಷರಾದ ಮಲ್ಲಮ್ಮ ಬಸಪ್ಪ ತಳವಾರ, ಬಸವರಾಜ ಮೇಟಿ, ಚಂದ್ರು ಹಡಪದ, ಪ್ರಕಾಶ ತಳವಾರ, ನಾಗರಾಜ ಪಾಟೀಲ, ಫೀರಜಾನಸಾಬ ನದಾಫ್, ಮಾಯವ್ವ ಕಳಸದ, ಸಾಹೇಬಜಾನ್‌ಸಾಬ ನದಾಫ್, ಗಂಗವ್ವ ಮುಂದಿನಮನಿ, ಫಾರೀಜಾನ ನದಾಫ್, ನಿಂಗವ್ವ ಮೂಲಿಮನಿ ಸೇರಿದಂತೆ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು, ಗ್ರಾಮಸ್ಥರಿದ್ದರು.

2 ಗಂಟೆಗಳ ನಂತರ ವಿಷಯ ತಿಳಿದ ಶಿರಹಟ್ಟಿ ಪೊಲೀಸ್ ಠಾಣೆಯಿಂದ ಆಗಮಿಸಿದ ಪೊಲೀಸರು ಗ್ರಾಮಸ್ಥರ ಮನವೊಲಿಸಿ ಸಂಚಾರ ಮುಕ್ತಗೊಳಿಸಿದರು.

### ಸಂಚಾರ ಸ್ಥಗಿತ

ಗದಗ-ಲಕ್ಷ್ಮೇಶ್ವರ ರಸ್ತೆ ಹಾಳಾಗಿದ್ದರಿಂದ ಕಳೆದ ಕೆಲ ತಿಂಗಳುಗಳಿಂದ ಕುಂದ್ರಳ್ಳಿ ಪ್ಲಾಟ್‌ನಲ್ಲಿನ ಕೇವಲ 10-12 ಅಡಿ ಅಗಲದ ರಸ್ತೆಯ ಮೂಲಕವೇ ಬಸ್ಸು, ಕಾರು, ಬೈಕ್‌ಗಳ ಜತೆಗೆ ಟಿಪ್ಪರ್‌ಗಳ ಅಬ್ಬರ ಜೋರಾಗಿದ್ದರಿಂದ ಇಲ್ಲಿನ ಜನರು ರೋಸಿ ಹೋಗಿದ್ದಾರೆ. ಶನಿವಾರ ರೊಚ್ಚಿಗೆದ್ದ ಗ್ರಾಮಸ್ಥರು ಗಂಟೆಗಳ ಕಾಲ ವಾಹನ ತಡೆದಿದ್ದರಿಂದ ಸಂಚಾರ ಸಂಪೂರ್ಣ ಸ್ಥಗಿತಗೊಂಡು ಪ್ರಯಾಣಿಕರೂ ಸಹ ಪರದಾಡುವಂತಾಗಿತ್ತು. ಮೊದಲು ಚಿಕ್ಕದಾಗಿಯೇ ಪ್ರಾರಂಭವಾದ ಪ್ರತಿಭಟನೆ ತೀವ್ರ ಸ್ವರೂಪ ಪಡೆದುಕೊಂಡಿತು. ಟಿಪ್ಪರ್, ಲಾರಿಗಳ ಚಾಲಕರ ಮೇಲೆ ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದರು.

### ಸುಗ್ರೀವಾಜ್ಞೆ ಒಪ್ಪದೇ ಸ್ಪಷ್ಟನೆ ಕೇಳಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್: ಕಾನೂನು ಸಚಿವ ಎಚ್.ಕೆ. ಪಾಟೀಲ ಪ್ರತಿಕ್ರಿಯೆ

# ಆಕ್ಷೇಪಣೆಗೆ ಸಮಂಜಸ ಉತ್ತರ ಕೊಡುತ್ತೇವೆ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯಪಾಲರಿಗೆ ತಪ್ಪು ಗ್ರಹಿಕೆ ಹಾಗೂ ಮಾಹಿತಿಯ ಕೊರತೆಯಾಗಿದೆ. 3 ಲಕ್ಷದವರೆಗೆ ಸಾಲದ ಮಿತಿಯಿದೆ. ಇದಕ್ಕೆ 5 ಲಕ್ಷ ರೂ ಹೇಗೆ ದಂಡ ಹಾಕುತ್ತೀರಿ ಎನ್ನುವುದು ರಾಜ್ಯಪಾಲರ ಪ್ರಶ್ನೆ. ಆದರೆ, ಸಾಲ ಎಷ್ಟು ಕೊಟ್ಟಿದ್ದಾರೆ ಎನ್ನುವುದು ಪ್ರಶ್ನೆಯಲ್ಲ, ಸಾಲ ವಸೂಲಿಗಾಗಿ ಸಾಲಗಾರರರನ್ನು ಹೇಗೆ ಹಿಂಸಿಸಿದ್ದೀರಿ ಎನ್ನುವುದು ಮುಖ್ಯ. ಆ ಹಿಂಸೆ, ಒತ್ತಡ ಹಾಕಿದ ಗುನ್ಹೆಗೆ ದಂಡವೇ ಹೊರತು ಸಾಲದ ಪ್ರಮಾಣಕ್ಕೆ ಅಲ್ಲ ಎಂದು ಕಾನೂನು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಕರ್ನಾಟಕದಲ್ಲಿ ಮೈಕ್ರೋ ಫೈನಾನ್ಸ್ ಕಂಪನಿಗಳ ಹಾವಳಿಯನ್ನು ತಡೆಗಟ್ಟುವ ರಾಜ್ಯ ಸರ್ಕಾರದ ಸುಗ್ರೀವಾಜ್ಞೆಗೆ ಅಂಕಿತ ಹಾಕದೆ ಹಲವು ಸ್ಪಷ್ಟನೆ ಕೇಳಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ವಾಪಸ್ ಕಳುಹಿಸಿದ ವಿಚಾರವಾಗಿ ಪ್ರತಿಕ್ರಿಯಿಸಿ ಅವರು ಗದುಗಿನಲ್ಲಿ ಮಾಧ್ಯಮದವರೊಂದಿಗೆ ಮಾತನಾಡುತ್ತಿದ್ದರು.

10 ವರ್ಷದವರೆಗೆ ಶಿಕ್ಷೆಯ ಪ್ರಮಾಣ ಜಾಸ್ತಿ ಆಗಿದೆ ಎನ್ನುವ ವಾದವಿದೆ. ಆದರೆ ಕರ್ನಾಟಕದಲ್ಲಿ ಇತ್ತೀಚೆಗೆ ಫೈನಾನ್ಸ್ ಕಿರುಕುಳದಿಂದ ಸಂಭವಿಸಿದ




ಆತ್ಮಹತ್ಯೆ ಪ್ರಕರಣಗಳು ಎಲ್ಲರಿಗೂ ತಿಳಿದಿವೆ. ಸಾಯುವವರೆಗೆ ಹಲ್ಲೆ ಮಾಡಿದ್ದಾರೆ. ಅಲ್ಲದೇ ಮನೆ ನಾಶವಾಗುತ್ತಿರುವುದನ್ನು ಗಮನಿಸಿಯೇ ಸರ್ಕಾರ ಈ ನಿರ್ಣಯ ಮಾಡಿದೆ ಎಂದರು.

ಸಾಲ ಕೊಡುವುದು ಒಂದು ರೀತಿಯ ಮೂಲಭೂತ ಹಕ್ಕು ಎನ್ನುವ ತಪ್ಪು ಗ್ರಹಿಕೆ ಆಗಿದೆ. ಮನಿ ಲಾಡ್ರಿಂಗ್, ನೋಂದಣಿ ಇಲ್ಲದೆಯೇ ಹಣದ ವ್ಯವಹಾರ ಮಾಡುವುದು, ಸಾಲ ಕೊಟ್ಟು ಹಿಂಸಾತ್ಮಕವಾಗಿ ವಸೂಲಿ ಮಾಡಿದರೆ ಮೂಲಭೂತ ಹಕ್ಕು ಎನ್ನಲಾಗುತ್ತದೆಯೇ ಎಂದು ಸಚಿವರು ಪ್ರಶ್ನಿಸಿದರು.

ಆರು ಅಂಶಗಳ ಬಗ್ಗೆ ರಾಜ್ಯಪಾಲರಿಗೆ ಕಡತ, ನಮ್ಮ ವಿವರಣೆಯೊಂದಿಗೆ ಕಳಿಸಿದ್ದೆವು. ಸಾರ್ವಜನಿಕರ, ಸಮಾಜದ ಹಿತದೃಷ್ಟಿಯಿಂದ ಅಂಗೀಕಾರ ಮಾಡಬೇಕು ಎಂಬುದು ನಮ್ಮ ಆಗ್ರಹ ಎಂದು ವಿವರಿಸಿದರು.

ಸಹಜವಾಗಿ ನಮ್ಮ ಸುಗ್ರೀವಾಜ್ಞೆ ಬಗ್ಗೆ ಅವರು ತಮ್ಮ ಆಕ್ಷೇಪ ಎತ್ತಿದ್ದಾರೆ. ಅದಕ್ಕೆ ನಮ್ಮ ಉತ್ತರ ಕೊಟ್ಟಿದ್ದೇವೆ. ರಾಜ್ಯಪಾಲರ ಆಕ್ಷೇಪಣೆಗೆ ಸಮಂಜಸ ಉತ್ತರ ಕೊಡುತ್ತೇವೆ. ಸಂವಿಧಾನಾತ್ಮಕವಾಗಿ ಏನು ಮಾಡಬೇಕೋ ಅದರ ವ್ಯಾಪ್ತಿಯಲ್ಲಿ ಸುಗ್ರೀವಾಜ್ಞೆ ಮಾಡುತ್ತೇವೆ ಎಂದರು.

ಇದೇ ವೇಳೆ ದೆಹಲಿ ಚುನಾವಣೆ ಫಲಿತಾಂಶ ವಿಚಾರವಾಗಿ ಮಾತನಾಡಿ, ಈ ಬಗ್ಗೆ 'ಆಪ್' ಆತ್ಮಾವಲೋಕನ ಮಾಡಿಕೊಳ್ಳಬೇಕು. ಜನರ ನಿರೀಕ್ಷೆಯಿಂದಾಗಿ ಆಮ್ ಆದ್ಮಿ ಪಾರ್ಟಿ ಮೇಲೆ ಬಂದಿತ್ತು. ಅವರ ನೀತಿ, ಭರವಸೆಗಳಿಗೆ ಬಹಳಷ್ಟು ಜನರ ಆಕರ್ಷಣೆ ಇತ್ತು. ಜನಾದೇಶ ನೋಡಿದರೆ ಮತ್ತೆ ನಾವು ಮರುಪರಿಶೀಲನೆ ಮಾಡಬೇಕು. ಪೂರ್ಣ ಫಲಿತಾಂಶ ಬಂದ ಮೇಲೆ ವಿಶ್ಲೇಷಣೆ ಮಾಡಬಹುದು ಎಂದರು.

ಮಹಾರಾಷ್ಟ್ರದಲ್ಲಿ 39 ಲಕ್ಷ ಮತದಾರರ ಸೇರ್ಪಡೆ ವಿಚಾರವಾಗಿ ಮಾತನಾಡಿ, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಎತ್ತಿರುವ ವಿಷಯ ಪ್ರಮುಖವಾಗಿದೆ. ರಾಷ್ಟ್ರೀಯ ವಿಷಯವಾಗಿ ಇದು ಚರ್ಚೆಯಾಗಬೇಕು. ಚುನಾವಣಾ ಸಂದರ್ಭದಲ್ಲಾದ ಲೋಪವಷ್ಟೇ ಅಲ್ಲ, ಮ್ಯಾನ್ಯುಪುಲೇಷನ್, ಅಕ್ರಮ ವಲಸಿಗರನ್ನು ಅಮೇರಿಕಾ ಗಡಿಪಾರು ಮಾಡುತ್ತಿರುವ ವಿಷಯದಲ್ಲಿ ಟ್ರಂಪ್ ಅವರು ಸುಸಂಸ್ಕೃತರಾಗಿ ನಡೆದುಕೊಳ್ಳಬೇಕು.

ಸುಸಂಸ್ಕೃತ ಸಮುದಾಯ ಎಂದು ಕರೆಸಿಕೊಳ್ಳುವ ಅಮೇರಿಕಾ ಭಾರತೀಯರನ್ನು ಈ ರೀತಿ ನಡೆಸಿಕೊಂಡಿದ್ದು ದುರ್ದೈವ. ಅಮೇರಿಕಾ ಇಷ್ಟೊಂದು ಬೆಳೆಯಲು ಭಾರತೀಯರ ಕೊಡುಗೆ ಅಮೂಲ್ಯ. ಇದನ್ನು ಅರ್ಥಮಾಡಿಕೊಂಡು ಟ್ರಂಪ್ ಸುಸಂಸ್ಕೃತರಾಗಿ ನಡೆದುಕೊಳ್ಳಲಿ ಎಂದರು.

ರಾಜ್ಯಪಾಲರ ದ್ವೇಷ ರಾಜಕಾರಣದ ವಿಚಾರವಾಗಿ ಮಾತನಾಡಿ, ನಾನು ದ್ವೇಷದ ಟಿಪ್ಪಣಿ ಮಾಡುವುದಿಲ್ಲ. ಆದರೆ, ಸಮಾಜದ ಹಿತ ಇರುವ ಸುಗ್ರೀವಾಜ್ಞೆ ಸದನದಲ್ಲಿ ಮಾತಾಡಿ ಎನ್ನುತ್ತಾರೆ. ದಿನವೂ ಎರಡು-ಮೂರು ಆತ್ಮಹತ್ಯೆ ನೋಡಿಕೊಂಡು ಸುಮ್ಮನೆ ಕೂರಲಾಗದು. ಈ ಕಾರಣಕ್ಕಾಗಿ ಸುಗ್ರೀವಾಜ್ಞೆ ತರಲು ಸಾಕಷ್ಟು ಚಿಂತನೆ ಮಾಡಿಯೇ ಈ ಹೆಜ್ಜೆ ಇಟ್ಟಿದ್ದೇವೆ ಎಂದು ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.

## ವಸಂತ ಮಡ್ಲೂರರಿಗೆ 'ರಾಜ್ಯ ಸದ್ಭಾವನಾ ಪ್ರಶಸ್ತಿ'

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಜಿಲ್ಲಾ ವಾರ್ತಾಧಿಕಾರಿ ವಸಂತ ಬಿ.ಮಡ್ಲೂರರಿಗೆ ಸ್ವಾಮಿ ವಿವೇಕಾನಂದ ರಾಜ್ಯ ಸದ್ಭಾವನಾ ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು.

ವಿಜಯಪುರ ಜಿಲ್ಲೆಯ ಮುದ್ದೇಬಿಹಾಳ ಪಟ್ಟಣದಲ್ಲಿ ರಾಜ್ಯ ಯುವ ಸಂಘಗಳ ಒಕ್ಕೂಟ ಹಾಗೂ ವಿಜಯಪುರ ಜಿಲ್ಲಾ ಮುದ್ದೇಬಿಹಾಳ ಘಟಕ, ವಿಜಯಪುರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ



ಜಾನಪದ ಪರಿಷತ್ ಮಹಿಳಾ ಘಟಕ, ಜಾನಪದ ಯುವ ಬ್ರಿಗೇಡ್ ಹಾಗೂ ಸಾಧನ ಮಹಿಳಾ ಒಕ್ಕೂಟ ಮುದ್ದೇಬಿಹಾಳ ಮತ್ತು ಧರ್ಮಯುದ್ಧ ದಿನಪತ್ರಿಕಾ ಬಳಗ ಮುದ್ದೇಬಿಹಾಳ ಇವುಗಳ ಸಂಯುಕ್ತ ಆಶ್ರಯದಲ್ಲಿ ಸ್ವಾಮಿ ವಿವೇಕಾನಂದರ 162ನೇ ಜಯಂತ್ಯುತ್ಸವದ ಪ್ರಯುಕ್ತ ಸ್ವಾಮಿ ವಿವೇಕಾನಂದ ರಾಷ್ಟ್ರ ಮತ್ತು ರಾಜ್ಯ ಸದ್ಭಾವನಾ ಪ್ರಶಸ್ತಿ ಪ್ರದಾನ ಸಮಾರಂಭ ಮತ್ತು ಸಾಂಸ್ಕೃತಿಕ ಯುವ ಸಂಭ್ರಮ ಸಮಾರಂಭ ಕಾರ್ಯಕ್ರಮದಲ್ಲಿ ಪ್ರಶಸ್ತಿ ನೀಡಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಸಿದ್ದನಕೊಳ್ಳದ ಡಾ. ಶಿವಕುಮಾರ ಸ್ವಾಮೀಜಿ, ಶಾಸಕ ಮತ್ತು ಕೆಎಸ್‌ಡಿ ನಿಗಮದ ಅಧ್ಯಕ್ಷ ಸಿ.ಎಸ್. ನಾಡಗೌಡ, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹಿರಿಯ ಕಲಾವಿದ ಗುರುರಾಜ ಹೊಸಕೋಟೆ, ಪುರಸಭೆ ಅಧ್ಯಕ್ಷ ಮೆಹಬೂಬ ಗೊಳಸಂಗಿ, ಬೆಲ್‌ಬಾಟಮ್ ಚಿತ್ರ ಖ್ಯಾತಿಯ ಕಲಾವಿದ ಕಡಬಗೆರೆ ಮುನಿರಾಜು, ರಾಜ್ಯ ಯುವ ಸಂಘಗಳ ಒಕ್ಕೂಟದ ರಾಜ್ಯಾಧ್ಯಕ್ಷ ಡಾ. ಜಾನಪದ ಬಾಲಾಜಿ, ಕಲಬುರಗಿ ವಿಭಾಗೀಯ ಸಂಚಾಲಕ ಮಂಜುನಾಥ ಜಿ.ಗೊಂಡಬಾಳ, ಗದಗ ಜಿಲ್ಲಾಧ್ಯಕ್ಷ ರವಿಕಾಂತ ಅಂಗಡಿ, ಬಿಜಾಪೂರ ಜಿಲ್ಲಾಧ್ಯಕ್ಷ, ಪತ್ರಕರ್ತ ಪುಂಡಲೀಕ ಮುರಾಳ ಇದ್ದರು.

## ಭೂಮಿಪೂಜಾ ಸಮಾರಂಭ ಫೆ.11ಕ್ಕೆ




■ ವಿಜಯಸಾಕ್ಷಿ ಸುದ್ದಿ, ಗದಗ

ಪಂಚಮಸಾಲಿ ಸಮಾಜ ಸೇವಾ ಟ್ರಸ್ಟ್ ಆಶ್ರಯದಲ್ಲಿ ಫೆ. 11ರಂದು ಬೆಳಗ್ಗೆ 10.30ಕ್ಕೆ ಇಲ್ಲಿನ ಕಳಸಾಪುರ ರಸ್ತೆಯಲ್ಲಿರುವ ಬ್ರೈಟ್ ಹಾರಿಜೋನ್ ಶಾಲೆ ಪಕ್ಕದಲ್ಲಿ ಕಿತ್ತೂರು ಚನ್ನಮ್ಮ ಭವನದ ಭೂಮಿಪೂಜೆ ಸಮಾರಂಭ ನಡೆಯಲಿದೆ ಎಂದು ಟ್ರಸ್ಟಿನ ಅಧ್ಯಕ್ಷ ಮೋಹನ ಮಾಳಶೆಟ್ಟಿ ಹೇಳಿದರು.

ಶನಿವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಭಾಪತಿ ಬಸವರಾಜ ಹೊರಟ್ಟಿ ಘನ ಉಪಸ್ಥಿತಿ ವಹಿಸುವರು. ಭೂಮಿಪೂಜೆಯನ್ನು ಕಾನೂನು ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ ಎಚ್.ಕೆ. ಪಾಟೀಲ ನೆರವೇರಿಸುವರು. ಕಾರ್ಯಕ್ರಮವನ್ನು ನರಗುಂದ ಶಾಸಕ ಸಿ.ಸಿ. ಪಾಟೀಲ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಸಂಸದ ಬಸವರಾಜ ಹೊರಟ್ಟಿ, ಸರಕಾರದ ಮುಖ್ಯ ಸಚೇತಕ ಸಲೀಂ ಅಹ್ಮದ್, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ್, ಮಾಜಿ ಶಾಸಕ ಕಳಕಪ್ಪ ಬಂಡಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ ಬಬರ್ಚಿ ಆಗಮಿಸಲಿದ್ದಾರೆ ಎಂದರು.

ಸುಮಾರು 38 ಸಾವಿರ ಚದರ್ ಅಡಿ ವಿಶಾಲವಾದ ಜಾಗವನ್ನು ವಂತಿಗೆ ಮೂಲಕ ಹಣ ಸಂಗ್ರಹಿಸಿ ಖರೀದಿಸಲಾಗಿದೆ. ಒಟ್ಟು 7 ಕೋಟಿ ರೂ. ವೆಚ್ಚದಲ್ಲಿ ಭವನ ನಿರ್ಮಾಣಕ್ಕೆ ನೀಲನಕ್ಷೆ ಸಿದ್ಧಪಡಿಸಲಾಗಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರು ಈಗಾಗಲೇ 1 ಕೋಟಿ ರೂ. ಅನುದಾನ ನೀಡುವುದಾಗಿ ಘೋಷಣೆ ಮಾಡಿದ್ದಾರೆ ಎಂದರು.


ಸುದ್ದಿಗೋಷ್ಠಿಯಲ್ಲಿ ಶಿವರಾಜ ಗೌಡ ಹಿರೇಮನಿಪಾಟೀಲ, ಸಿದ್ದು ಪಲ್ಲೇದ, ಅಶೋಕ ಸಂಕಣ್ಣವರ, ಅನಿಲಕುಮಾರ ಪಾಟೀಲ, ಸಂಗಮೇಶ ಕವಳಿಕಾಯಿ, ಸಂತೋಷ ಅಕ್ಕಿ, ಶಾಂತಣ್ಣ ಮುಳವಾಡ, ವಿಶ್ವನಾಥ ಹಳ್ಳಿಕೇರಿ, ಸುರೇಶ ಚಿತ್ತರಗಿ ಇತರರ ಉಪಸ್ಥಿತರಿದ್ದರು.

## ಅಗತ್ಯ ಸೌಲಭ್ಯ ಕಲ್ಪಿಸಲು ಪ್ರಾಮಾಣಿಕ ಪ್ರಯತ್ನ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿರಹಟ್ಟಿ ಮೀಸಲು ಮತಕ್ಷೇತ್ರ ವ್ಯಾಪ್ತಿಯಲ್ಲಿ ಅನೇಕ ಅಭಿವೃದ್ಧಿ ಕಾಮಗಾರಿಗಳಿಗೆ ಬೇಡಿಕೆಯಿದ್ದು, ಸರಕಾರದಿಂದ ಅನುದಾನ ತರುವ ಮೂಲಕ ರಸ್ತೆ, ಕುಡಿಯುವ ನೀರು ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸುವ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದೇನೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಶನಿವಾರ ತಾಲೂಕಿನ ಸೂರಣಗಿ ಗ್ರಾಮದ ಪ್ರಗತಿ ಕಾಲೋನಿ ಅಭಿವೃದ್ಧಿ ಯೋಜನೆಯಡಿ 50 ಲಕ್ಷ ರೂ ವೆಚ್ಚದಲ್ಲಿ ಸಿಸಿ ರಸ್ತೆ ಕಾಮಗಾರಿಗೆ ಭೂಮಿಪೂಜೆ



ನೆರವೇರಿಸಿ ಮಾತನಾಡಿದರು.

ಈ ಭಾಗದ ಜನರ ಬಹುದಿನದ ಬೇಡಿಕೆಯಾಗಿದ್ದ ರಸ್ತೆ ನಿರ್ಮಾಣಕ್ಕೆ ಇದೀಗ ಅನುದಾನ ದೊರಕಿದೆ. ಗುತ್ತಿಗೆದಾರರು ಗ್ರಾಮಸ್ಥರ ಸಹಕಾರದೊಂದಿಗೆ ಗುಣಮಟ್ಟದ ಕಾಮಗಾರಿ ಮಾಡಲು ಸೂಚಿಸಿದ್ದೇನೆ. ಗ್ರಾಮೀಣ ಭಾಗದಲ್ಲಿ ಎಸ್‌ಸಿಪಿ ಯೋಜನೆಯಡಿ ರಸ್ತೆ, ಚರಂಡಿ ಅಭಿವೃದ್ಧಿ ಕಾಮಗಾರಿಯನ್ನು ಮತ್ತು ಸಂಪೂರ್ಣ ಹಾಳಾಗಿರುವ ಸೂರಣಗಿ-ಬೆಳ್ಳಟ್ಟಿ ರಸ್ತೆ ಕಾಮಗಾರಿಯನ್ನು ಶೀಘ್ರದಲ್ಲಿ ಕೈಗೆತ್ತುಕೊಳ್ಳಲಾಗುವುದು ಎಂದು ಹೇಳಿದರು.

ಈ ವೇಳೆ ಗ್ರಾ.ಪಂ ಅಧ್ಯಕ್ಷೆ ಚನ್ನಮ್ಮ ಕಳ್ಳಿಹಾಳ, ಗ್ರಾ.ಪಂ ಸದಸ್ಯರಾದ ಪ್ರವೀಣ ಸೂರಣಗಿ, ತುಕ್ಕಪ್ಪ ಪೂಜಾರ, ಜಗದೀಶಗೌಡ ಪಾಟೀಲ, ಜಾನು ಲಮಾಣಿ, ಶಿವಣ್ಣ ಲಮಾಣಿ, ನಾಗರಾಜ ಹಾವಳಕೇರಿ, ಕುಮಾರ ಬೆಟಗೇರಿ, ಪರಶುರಾಮ ಇಮ್ಮಡಿ, ಪಂಚಾಕ್ಷರಯ್ಯ ಬೆನಕನಹಳ್ಳಿ, ಸೋಮಣ್ಣ ಲಮಾಣಿ, ಕೃಷ್ಣಾ ಲಮಾಣಿ, ಸಂತೋಷ ರಾಠೋಡ, ರಮೇಶ ಹಂಗನಕಟ್ಟಿ, ವೀರೇಶ ಕಳ್ಳಿಹಾಳ, ಬಸವರಾಜ ಇಟಗಿ, ಬಸವರಾಜ ಮೇಲ್ಮುರಿ, ಸಂತೋಷ ಬಡಕಲ್, ಸಚಿನ ಮೇಲ್ಮುರಿ, ಗಣೇಶ ಲಮಾಣಿ ಅನೇಕರಿದ್ದರು.

## ಸಂಪಾದಕೀಯ

# ದೆಹಲಿ ವಿಧಾನಸಭೆ ಫಲಿತಾಂಶ ಕರ್ನಾಟಕಕ್ಕೆ ಎಚ್ಚರಿಕೆ ಆಗಲಿ

ದೇಶದ ಗಮನ ಸೆಳೆದಿದ್ದ ರಾಷ್ಟ್ರ ರಾಜಧಾನಿ ದೆಹಲಿ ಚುನಾವಣೆ ಫಲಿತಾಂಶ ಬಂದಿದೆ. ಹ್ಯಾಟ್ರಿಕ್ ಗೆಲುವಿನ ನಿರೀಕ್ಷೆಯಲ್ಲಿದ್ದ ಆಮ್ ಆದ್ಮಿ ಪಾರ್ಟಿ ಕನಸು ನುಚ್ಚು ನೂರಾಗಿದೆ. ಬರೊಬ್ಬರಿ 27 ವರ್ಷಗಳ ನಂತರ ಬಿಜೆಪಿ ಅಧಿಕಾರಕ್ಕೆ ಬಂದಿದ್ದು, ಕಾಂಗ್ರೆಸ್ ಈ ಬಾರಿಯೂ ಒಂದೇ ಒಂದು ಸ್ಥಾನ ಗೆಲ್ಲಲು ಸಾಧ್ಯವಾಗದ ಸ್ಥಿತಿಗೆ ತಲುಪಿದೆ.

ದೆಹಲಿ ವಿಧಾನಸಭೆ ಚುನಾವಣೋತ್ತರ ಸಮೀಕ್ಷೆಗಳಲ್ಲೆ ಈ ಬಾರಿ ಬಿಜೆಪಿ ಪರವಾಗಿಯೇ ಇದ್ದವು. ಅದಕ್ಕೆ ಕಾರಣಗಳೂ ಇದ್ದವು. ಭ್ರಷ್ಟಾಚಾರ ವಿರೋಧಿ ಹೋರಾಟದಿಂದ ಹುಟ್ಟಿಕೊಂಡ ಆಮ್ ಆದ್ಮಿ ಪಾರ್ಟಿ, ಅದೇ ಭ್ರಷ್ಟಾಚಾರದ ಕೂಪಕ್ಕೆ ಸಿಲುಕಿ ಇವತ್ತು ಅಧಿಕಾರ ಕಳೆದುಕೊಂಡಿದೆ. ಪ್ರಾಮಾಣಿಕತೆಯ ನಾಟಕಕ್ಕೆ ತೆರೆ ಬಿದ್ದಿದೆ.

ಎಎಪಿ ಪಕ್ಷ ಅಧಿಕಾರಕ್ಕೆ ಬಂದ ಮೊದಲ ಅವಧಿಯಲ್ಲಿ ಇದ್ದ ಕಾರ್ಯವೈಖರಿ ಎರಡನೆ ಅವಧಿಯಲ್ಲಿ ಕಾಣಲಿಲ್ಲ. ಆಮ್ ಆದ್ಮಿ ಪಾರ್ಟಿ ಅಭಿವೃದ್ಧಿಗಿಂತ ವಿವಾದಗಳನ್ನೆ ಹೆಚ್ಚಾಗಿ ಮೈಮೇಲೆ ಎಳೆದುಕೊಂಡಿತು. ಅದಕ್ಕಿಂತ ಹೆಚ್ಚಾಗಿ ಕೇಂದ್ರ ಸರಕಾರ ಮತ್ತು ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಟೀಕೆ ಮಾಡುವುದರಲ್ಲಿಯೇ ಕಾಲ ಹರಣ ಮಾಡಿತು.

ಅರವಿಂದ ಕೇಜ್ರಿವಾಲ್ ನೇತೃತ್ವದ ಸರಕಾರ ಅನೇಕ ಜನಪರ ಕಾರ್ಯಕ್ರಮಗಳ ಮೂಲಕ ದೆಹಲಿ ಜನರ ಮನೆ ಮಾತಾಯಿತು. ಉಚಿತ ವಿದ್ಯುತ್, ಸಾರಿಗೆ, ಶಿಕ್ಷಣ ಕ್ಷೇತ್ರದಲ್ಲಿ ಬಹುದೊಡ್ಡ ಕಾರ್ಯಕ್ರಮ ನೀಡಿತು. ಇವತ್ತು ಕರ್ನಾಟಕದ ಕಾಂಗ್ರೆಸ್ ಸರಕಾರ ನೀಡಿದ ಗ್ಯಾರಂಟಿಗಳನ್ನು ಆಮ್ ಆದ್ಮಿ ಪಾರ್ಟಿ ದಶಕದ ಹಿಂದೆಯೇ ನೀಡಿದೆ. ಆದಾಗ್ಯೂ ದೆಹಲಿ ಗದ್ದುಗೆ ಉಳಿಸಿಕೊಳ್ಳಲು ಆಮ್ ಆದ್ಮಿ ಪಕ್ಷಕ್ಕೆ ಸಾಧ್ಯವಾಗಲಿಲ್ಲ.

ಸದ್ಯ ಕರ್ನಾಟಕದ ಕಾಂಗ್ರೆಸ್ ಸ್ಥಿತಿಯೂ ಒಂದು ರೀತಿಯಲ್ಲಿ ಆಮ್ ಆದ್ಮಿ ಪಾರ್ಟಿಯ ರೀತಿಯಲ್ಲಿಯೇ ಇದೆ. ಅದೇ ದಾರಿಯಲ್ಲಿಯೂ ಸಾಗುತ್ತಿದೆ. ದೆಹಲಿ ಚುನಾವಣೆ ಫಲಿತಾಂಶವನ್ನು ಕರ್ನಾಟಕ ಕಾಂಗ್ರೆಸ್ ಗಂಭೀರವಾಗಿ ಪರಿಗಣಿಸುವ ಕಾಲ ಇದಾಗಿದೆ.

## ಹುಡುಗರಿಗೆ ಕನ್ಯೆ ಸಿಗದಿರಲು ಇದೊಂದೇ ಕಾರಣವೇ?!!

# ಇಷ್ಟು ಮಾಡಿದರೆ ಎಲ್ಲರಿಗೂ ಮದುವೆ!

ಮದುವೆಯಾಗಲು ಕೇಂದ್ರ-ರಾಜ್ಯ ಸರ್ಕಾರಗಳ ಆದೇಶ ಅನ್ವಯ ಹುಡುಗನಿಗೆ 21 ವರ್ಷ, ಹುಡುಗಿಗೆ 18 ವರ್ಷ ವಯಸ್ಸು ಪೂರ್ಣಗೊಂಡಿರಬೇಕು. ಆದರೆ 30-35 ವರ್ಷವಾದರೂ ಬಹುತೇಕ ಹುಡುಗರಿಗೆ ಕನ್ಯೆ ಸಿಗುತ್ತಿಲ್ಲ. ಅದರಲ್ಲೂ ರೈತರು, ಕೂಲಿ ಕಾರ್ಮಿಕರು, ಬಡ ಕುಟುಂಬದ ಹುಡುಗರಿಗೆ ಕನ್ಯೆ ಸಿಗುತ್ತಿಲ್ಲ. ಕಾರಣ, ಹೆಣ್ಣಿನ ಮನೆಯವರು ಸರ್ಕಾರಿ ನೌಕರಿ ಡಿಮ್ಯಾಂಡ್ ಮಾಡ್ತಾರಂತೆ. ಬಹುತೇಕ ಹುಡುಗರಿಗೆ ಇದೊಂದು ಕಾರಣದಿಂದಾಗಿ ಮದುವೆ ಆಗಲು ಸಮಸ್ಯೆಯಾಗುತ್ತಿದೆ. ಸರ್ಕಾರಿ ಹುದ್ದೆ ಅನ್ನುವುದು ಎಲ್ಲರಿಗೂ ಸಿಗುವುದಿಲ್ಲ. ಅದೊಂದು ಲಾಟರಿ ಆಗಿದ್ದು, ಎಲ್ಲರೂ ಸರ್ಕಾರಿ ನೌಕರಿ ಬೇಕು ಅಂದರೆ ಯಾರೂ ರೈತರೇ ಇರಲಾರರು. ಆಗ ಆಹಾರಕ್ಕಾಗಿ ಪರದಾಡುವ ಸನ್ನಿವೇಶ ಸೃಷ್ಟಿಯಾಗುತ್ತದೆ.

ಸರ್ಕಾರಿ ನೌಕರಿ ಪಡೆದವರು ಸಾರ್ವಜನಿಕರ ಸೇವೆ ಮಾಡುವುದೇ ಅಪರೂಪ. ಅದರಲ್ಲೂ ಸಮಸ್ಯೆ ಹೇಳಲು ಬಂದ ಸಾರ್ವಜನಿಕರು ಕಚೇರಿಯಿಂದ ಕಚೇರಿಗೆ ಅಲೆದಾಡುವ ಮನಸ್ಥಿತಿ ಇದೆ. ಅದಕ್ಕಾಗಿ ಬಹುತೇಕ ಹುಡುಗರ ಬೇಡಿಕೆ ಏನೆಂದರೆ, ಕೇಂದ್ರ ಸೇರಿದಂತೆ ಬೇರೆ ರಾಜ್ಯದ ಊಸ್ ಬರಿ ಬದಲು ನಮ್ಮ ರಾಜ್ಯದ ಸರ್ಕಾರಿ



ಹುದ್ದೆಯನ್ನು ಖಾಸಗೀಕರಣ ಮಾಡುವ ಮೂಲಕ ಖಾಸಗಿ ಹುದ್ದೆ ಎಂದು ಪರಿಗಣಿಸಿದರೆ, ಕರ್ನಾಟಕ ರಾಜ್ಯದ ಎಲ್ಲ ಹುಡುಗರಿಗೂ ಮದುವೆ ಆಗುವ ಯೋಗ ಕೂಡಿಬರಲಿದೆ ಎಂಬುದು ಆಶಾಭಾವನೆ.

ಸರ್ಕಾರಿ ನೌಕರಿಯಿಂದ ಹುಡುಗರಿಗೂ ಕನ್ಯೆ ಸಿಗುತ್ತಿಲ್ಲ. ಜೊತೆಗೆ ಸಾರ್ವಜನಿಕರ ಸಮಸ್ಯೆಗಳಿಗೂ ಮುಕ್ತಿ ಸಿಗುತ್ತಿಲ್ಲ. ಲಂಚ ತಿನ್ನುವ ವ್ಯವಸ್ಥೆಯೂ ಹೋಗುತ್ತಿಲ್ಲ. ಭ್ರಷ್ಟಾಚಾರ ನಿಯಂತ್ರಣ ಮಾಡಲು ಸಾಧ್ಯವಾಗುತ್ತಿಲ್ಲ.

ಭ್ರಷ್ಟಾಚಾರ ತಡೆಯುವ ತನಿಖಾ ಸಂಸ್ಥೆಗಳ ಅಧಿಕಾರಿಗಳಿಗೆ ದಾಳಿ ಮಾಡದಂತೆ ರಾತ್ರೋರಾತ್ರಿ ಸೂಟ್‌ಕೇಸ್ ಕಳಿಸುತ್ತಾರೆಂಬ ಆರೋಪವಾಗುತ್ತಿದೆ. ಒಟ್ಟಿನಲ್ಲಿ ಎಲ್ಲ ಸಮಸ್ಯೆಗಳಿಗೂ ಸರ್ಕಾರಿ ನೌಕರಿ ಎಂಬುದೇ ಕಾರಣವಾಗಿದೆ ಎಂಬುದು ಅನೇಕರ ಅಭಿಪ್ರಾಯ. ಅದಕ್ಕಾಗಿ ರಾಜ್ಯ ಸರ್ಕಾರ ವಿಶೇಷ ಪ್ರಕರಣವೆಂದು ಪರಿಗಣಿಸಿ, ಮದುವೆ ವಯಸ್ಸಿಗೆ ಬಂದ ರಾಜ್ಯದ ಎಲ್ಲ ಹುಡುಗರಿಗೂ ಸರ್ಕಾರಿ ನೌಕರಿಯನ್ನು (ಐಪಿಎಸ್, ಐಎಎಸ್, ಕೆಎಎಸ್, ಪೋಲಿಸ್ ಇಲಾಖೆ ಹೊರತುಪಡಿಸಿ) ಖಾಸಗಿ ಹುದ್ದೆ ಎಂದು ಪರಿಗಣಿಸಿದರೆ ಸಾಕು, ಎಲ್ಲ ಯುವಕರಿಗೂ ಮದುವೆ ಆಗಿ ಸರ್ಕಾರಕ್ಕೆ ಪುಣ್ಯ ಬರಲಿದೆ ಎನ್ನುವುದು ಬಹುತೇಕರ ಆಶಯ.

**– ವೀರೇಶ ಧೂಪದಮಠ.**
ಸಾಮಾಜಿಕ ಕಾರ್ಯಕರ್ತ, ಪತ್ರಕರ್ತ.

# ರಸ್ತೆ ಕಾಮಗಾರಿಗೆ ಭೂಮಿಪೂಜೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ನಗರದ 31ನೇ ವಾರ್ಡಿನ ಜೋಡ ಮಾರುತಿ ದೇವಸ್ಥಾನದ ಹತ್ತಿರ ಹಾಗೂ ರಂಗನವಾಡ ಪ್ರದೇಶದಲ್ಲಿ ರಸ್ತೆ ಕಾಮಗಾರಿಗಳಿಗೆ ನಗರಸಭೆ ಸದಸ್ಯೆ ಶೈಲಾ ಬಾಕಳೆ ಭೂಮಿಪೂಜೆ ನೆರವೇರಿಸಿದರು.



ನಂತರ ಮಾತನಾಡಿದ ಅವರು, 31ನೇ ವಾರ್ಡಿನಲ್ಲಿನ ಜನರ ಸಮಸ್ಯೆಗಳಿಗೆ ಸ್ಪಂದಿಸಿ ಹಂತ ಹಂತವಾಗಿ ಅಭಿವೃದ್ಧಿ ಕೆಲಸಗಳನ್ನು ಮಾಡಲಾಗುತ್ತಿದ್ದು, ಗುತ್ತಿಗೆದಾರರು ಗುಣಮಟ್ಟದ ಕೆಲಸ ಮಾಡುವ ಮೂಲಕ ಜನರ ವಿಶ್ವಾಸ ಗಳಿಸಬೇಕು ಎಂದು ಹೇಳಿದರು.

ರಾಜ್ಯ ಬಿಜೆಪಿ ಹಿಂದುಳಿದ ವರ್ಗಗಳ ಕಾರ್ಯದರ್ಶಿ ಸುಧೀರ ಕಾಟಿಗರ ಮಾತನಾಡಿ, ಸರಕಾರದಿಂದ ಇನ್ನಷ್ಟು ಅನುದಾನವನ್ನು ಪಡೆದು 31ನೇ ವಾರ್ಡನ್ನು ಅಭಿವೃದ್ಧಿಗೊಳಿಸುವ ಮೂಲಕ ಅವಳಿ ನಗರದಲ್ಲಿ ಮಾದರಿ ವಾರ್ಡ್‌ನ್ನಾಗಿ ಮಾಡಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ವಾರ್ಡಿನ ಹಿರಿಯರಾದ ಲೋಕನಾಥಸಾ ಬದಿ, ಜಗದೀಶ ಶೇಜವಾಡೇಕರ, ರಾಜು ಕಾಟಿಗರ, ನಿರಂಜನ ಓಝಾ, ಇರ್ಷಾದ ಮಾನ್ವಿ, ನಗರಸಭೆ ಮಾಜಿ ಸದಸ್ಯೆ ಯಲ್ಲೂಬಾಯಿ ನಿರಂಜನ, ಉದ್ಯಮಿ ಕಿರಣ ಬಾಂಡಗೆ, ಶ್ರೀಕಾಂತ ಬಾಕಳೆ, ರಾಮಚಂದ್ರಸಾ ಶಿದ್ಲಿಂಗ, ರಾಜೇಶ ಖೋಡೆ, ನಾಸೀರ್ ನರೇಗಲ್, ಅಂಜು ಖಟವಟೆ, ಶ್ರೀಕಾಂತ ಪವಾರ, ಪ್ರಕಾಶ ಕಾಟಿಗರ, ನಾಗರಾಜ ಖೋಡೆ, ಚಂದ್ರಕಾಂತ ಬಾಕಳೆ, ಮಾಧು ಬದಿ, ರವಿ ಚವ್ಹಾಣ, ಭರತ ಮಾರೆಪ್ಪನವರ, ಮಯೂರ ಕಾಟಿಗರ, ವಿಠ್ಠಲ ಬದಿ, ಸರೋಜಾಬಾಯಿ ಶೇಜವಾಡೆಕರ, ಸುಮಿತ್ರಾಬಾಯಿ ಕಾಟಿಗರ, ರುಕ್ಮಿಣಿಬಾಯಿ ಕಾಟಿಗರ ಮುಂತಾದವರು ಉಪಸ್ಥಿತರಿದ್ದರು.

# ಬ್ಲಾಕ್ ಯುವ ಕಾಂಗ್ರೆಸ್ ಅಧ್ಯಕ್ಷರಾಗಿ ಆಯ್ಕೆ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**



ತಾಲೂಕಿನ ಬಟ್ಟೂರ ಗ್ರಾಮದ ಕೆಪಿಸಿಸಿ ಸದಸ್ಯರಾಗಿದ್ದ ದಿ. ಯು. ಎನ್. ಹೊಳಲಾಪೂರ ಅವರ ಮೊಮ್ಮಗ ರಾಹುಲ್ ಬಸವರಾಜ ಹೊಳಲಾಪೂರ ಅವರು ಲಕ್ಷ್ಮೇಶ್ವರ ಬ್ಲಾಕ್ ಯುವ ಕಾಂಗ್ರೆಸ್ ಘಟಕದ ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ.

2024ರ ಆಗಸ್ಟ್ 20ರಿಂದ ಸೆಪ್ಟಂಬರ 20ರವರೆಗೂ ನಡೆದ ಚುನಾವಣೆಯ ಫಲಿತಾಂಶ ತಡೆಯಾಜ್ಞೆ ಹಿನ್ನೆಲೆಯಲ್ಲಿ ಘೋಷಣೆಯಾಗದೇ ಉಳಿದುಕೊಂಡಿತ್ತು. ಶುಕ್ರವಾರ ಫಲಿತಾಂಶ ಪ್ರಕಟವಾಗಿದ್ದು, ರಾಹುಲ್ ಹೊಳಲಾಪುರ ಅವರು ಅತಿ ಹೆಚ್ಚು ಮತಗಳನ್ನು ಪಡೆದು ಲಕ್ಷ್ಮೇಶ್ವರ ಬ್ಲಾಕ್ ಯುವ ಕಾಂಗ್ರೆಸ್ ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ.

## "ಗಡಿ ಕಾಯುವ ವೀರ ಯೋಧರಿಗೆ ನನ್ನೆದೆಯ ನಮನ"

ನಮ್ಮ ತಾಯ್ನಾಡಿಗೆ ಸೇವೆ ಸಲ್ಲಿಸಲೆಂದೆ ಜನಿಸಿದ ಮಗ ನೀನು
ಕೆಚ್ಚೆದೆಯ ಗುಂಡಿಗೆಯ ಎಂಟೆದೆಯ ಬಂಟ ನೀನು
ಶತ್ರು ಸೇನೆಗೆ ನಡುಕವನ್ನುಂಟು ಮಾಡುವ ಭಾರತಾಂಬೆಯ ಹೆಮ್ಮೆಯ ಪುತ್ರ ನೀನು
ಏನೆಂದು ಬರೆಯಲಿ ನಾನು
ಹೆಮ್ಮೆಯ ಸೈನಿಕನು ನೀನು....!

ತನಗಲ್ಲದೆ ಹೋದರು ತನ್ನವರಿಗಾಗಿ ಶ್ರಮಿಸುವ ಶ್ರಮಜೀವಿ ನೀನು
ನಿಮ್ಮ ನಗುವನ್ನು ಸದಾ ಬಯಸುವ ಬರಹಗಾತಿ ನಾನು
ನಾ ಬರೆಯುವ ಪ್ರತಿ ಅಕ್ಷರವು ಹೆಮ್ಮೆ ಪಡುವಂತಹ ಸೈನಿಕನು ನೀನು
ನಿಮ್ಮಂತ ವೀರ ಯೋಧರಿಗೆ ನಮನವನ್ನು ಸಲ್ಲಿಸುವ ಹುಚ್ಚು ಹೃದಯವಾಸಿ ನಾನು....!

ನಿಲುಕದ ಭಾವನೆಗಳ ಸವಾರಿ ನೀನು
ದೇಶದ ಕನಸುಗಳನ್ನು ಹೊತ್ತು ಸಾಗಿಸುವ ಧೀಮಂತ ನೀನು
ದೇಶ ರಕ್ಷಣೆಗೆಂದೆ ಜನ್ಮ ತಾಳಿದ ಜೀವ ನೀನು
ವರ್ಣನೆಗೂ ಮೀರಿದ ಅದ್ಭುತ ಶಕ್ತಿ ನೀನು
ಏನೆಂದು ಬಣ್ಣಿಸಲಿ ನಾನು
ನಮ್ಮ ಗಡಿ ಕಾಯುವ ವೀರ ಯೋಧನು ನೀನು...!

ನಿಷ್ಕಲ್ಮಶ ಮನಸ್ಸಿನಿಂದ ಸೂರ್ಯನಂತೆ ಪ್ರಕಾಶಮಾನವಾಗಿ ಬೆಳಗು ನೀನು
ನಿನ್ನ ನಾಡನ್ನು ರಕ್ಷಿಸುವ ಭಾವುಟವನ್ನು
ಎತ್ತಿಹಿಡಿದು ಮುಗಿಲೆತ್ತರಕ್ಕೆ ಹಾರು ನೀನು
ತಾಯಿ ಮಡಿಲ ಪ್ರತಿರೂಪ ಸೈನಿಕನು ನೀನು
ನಿಮ್ಮ ರಕ್ಷಣೆಗೆ ನನ್ನದೊಂದು ಶರಣು...!



**– ಪೂಜಾ ಗ ಗೊರವನಕೊಳ್ಳ**
(ಸವದತ್ತಿ)

## ಕಲರ್ಸ್ ಕನ್ನಡದಲ್ಲಿ ಹೊಸ ರಿಯಾಲಿಟಿ ಶೋಗಳು ವಾರಾಂತ್ಯಕ್ಕೆ ನಗು-ರೋಮಾಂಚನ ತುಂಬಿದ ಭರ್ಜರಿ ಮನರಂಜನೆ

# ಬಾಯ್ಸ್ ವರ್ಸಸ್ ಗರ್ಲ್ಸ್ ಮತ್ತು ಮಜಾ ಟಾಕೀಸ್

**■ ಬರ್ತಿದೆ ಡಬಲ್ ಮಜಾ ಪ್ರತಿ ಎಪಿಸೋಡ್ ನಂತರ ಕೇಳುವ ಪ್ರಶ್ನೆಗೆ ಸರಿಯುತ್ತರ ನೀಡಿದ ಅದೃಷ್ಟಶಾಲಿಗೆ ಬಹುಮಾನ**

**■ ವಿಜಯಸಾಕ್ಷಿ ಸುದ್ದಿ, ಗದಗ**


ಜನಪ್ರಿಯ ಟಿವಿ ಚಾನೆಲ್ ಕಲರ್ಸ್ ಕನ್ನಡವು ಎರಡು ಹೊಸ ರಿಯಾಲಿಟಿ ಶೋಗಳನ್ನು ಶುರುಮಾಡುತ್ತಿದೆ. 'ಬಾಯ್ಸ್ ಗಿ/ಖ ಗರ್ಲ್ಸ್' ಎಂಬ ಗೇಮ್ ಶೋ ಮತ್ತು ಕಚಗುಳಿಯಿಟ್ಟು ನಗಿಸುವ 'ಮಜಾ ಟಾಕೀಸ್' ಶೋಗಳು ಫೆಬ್ರವರಿ 1ರಿಂದ ಪ್ರಸಾರ ಆರಂಭಿಸಿದ್ದು, ಪ್ರತಿ ಶನಿವಾರ ಮತ್ತು ಭಾನುವಾರ ಏಳೂವರೆಗೆ 'ಬಾಯ್ಸ್ ಗಿ/ಖ ಗರ್ಲ್ಸ್' ಹಾಗೂ 9 ಗಂಟೆಗೆ ಮಜಾ ಟಾಕೀಸ್ ಕಾರ್ಯಕ್ರಮಗಳು ನಿಮ್ಮನ್ನು ರಂಜಿಸಲಿವೆ.

**'ಬಾಯ್ಸ್ ಗಿ/ಖ ಗರ್ಲ್ಸ್':**

ಹೊಸ ರೀತಿಯ ರಿಯಾಲಿಟಿ ಶೋಗಳಿಗೆ ಹೆಸರಾಗಿರುವ ಕಲರ್ಸ್ ಕನ್ನಡ ಶುರುಮಾಡುತ್ತಿರುವ 'ಬಾಯ್ಸ್ ಗಿ/ಖ ಗರ್ಲ್ಸ್' ಒಂದು ರೋಮಾಂಚಕ ಗೇಮ್ ಶೋ. ಹುಡುಗ ಮತ್ತು ಹುಡುಗಿಯರ ಗುಂಪುಗಳು ಜಿದ್ದಾಜಿದ್ದಿಗೆ ಬಿದ್ದು ನೋಡುಗರ ಬಿಸಿ ಏರಿಸುವ ಆಟದ ಶೋ 'ಬಾಯ್ಸ್ ವರ್ಸಸ್ ಗರ್ಲ್ಸ್' ಕನ್ನಡ ಕಿರುತೆರೆಗೆ ಹೊಸದೆನಿಸುವ ಥ್ರಿಲ್ ಅನ್ನು ಹೊತ್ತು ತರುತ್ತಿದೆ.

ಬಾಯ್ಸ್ ತಂಡವನ್ನು ಬಿಗ್ ಬಾಸ್ ಖ್ಯಾತಿಯ ವಿನಯ್ ಗೌಡ ಮುನ್ನಡೆಸಿದರೆ, ಹುಡುಗಿಯರ ಗುಂಪಿನ ನಾಯಕಿ ನಟಿ ಶುಭಾ ಪೂಂಜಾ. ಇನ್ನು ಸ್ಪರ್ಧಿಗಳ ಪಟ್ಟಿಯೂ ಅಷ್ಟೇ ರೋಚಕವಾಗಿದೆ. ಈಗಷ್ಟೇ ಬಿಗ್ ಬಾಸ್ ಗೆದ್ದಿರುವ ಹನುಮಂತ ಲಮಾಣಿ, ಬಿಗ್ ಬಾಸ್ ಮನೆಯಲ್ಲಿ ಗಮನ ಸೆಳೆಯುವಂಥ ಆಟವಾಡಿದ ಧನರಾಜ್ ಆಚಾರ್, ಐಶ್ವರ್ಯಾ ಸಿಂಧೋಗಿ, ಶೋಭಾ ಶೆಟ್ಟಿ, ಚೈತ್ರಾ ಕುಂದಾಪುರ ಮತ್ತು ರಜತ್ ಕೂಡ ಇಲ್ಲಿ ನಿಮಗೆ ಸಿಗುತ್ತಾರೆ. ಜೊತೆಗೆ ಕಿರುತೆರೆಯ ಜನಪ್ರಿಯ ಮುಖಗಳಾದ




ಪ್ರಶಾಂತ್, ಮಂಜು ಪಾವಗಡ, ನಿವೇದಿತಾ ಗೌಡ, ಸೂರಜ್, ವಿಶ್ವಾಸ್, ಸ್ನೇಹಿತ್, ವಿವೇಕ್ ಸಿಂಹ, ರಕ್ಷಿತ್, ಚಂದನ, ರಮ್ಯ, ಪ್ರಿಯಾ ಸವಡಿ, ಸ್ಪಂದನಾ ಮತ್ತು ಐಶ್ವರ್ಯಾ ವಿನಯ್ ಕೂಡ ಆಟಕ್ಕೆ ಕಿಚ್ಚು ಹಚ್ಚಲಿದ್ದಾರೆ. ಈ ಪಟ್ಟಿಯನ್ನೊಮ್ಮೆ ನೋಡಿದರೂ ಸಾಕು, ಆಟದ ಬಿಸಿ ಎಷ್ಟಿರುತ್ತೆ ಎಂಬುದನ್ನು ಊಹಿಸಬಹುದು.

ಶೋನ ಉದ್ದಕ್ಕೂ ಸ್ಪರ್ಧಿಗಳಿಗೆ ರೋಚಕ ಸವಾಲುಗಳಿರುತ್ತವೆ. ಹುಡುಗ ಹುಡುಗಿಯರು ತಮ್ಮ ಚಾಕಚಕ್ಯತೆ, ಸೃಜನಶೀಲತೆ ಮತ್ತು ಒಟ್ಟಾಗಿ ಆಡುವ ಮನೋಭಾವದಿಂದ ಈ ಸವಾಲುಗಳನ್ನು ಎದುರಿಸಬೇಕಾಗುತ್ತದೆ. ಗೇಮುಗಳ ಜೊತೆಗೆ ನೃತ್ಯ ಸೇರಿದಂತೆ ಉಳಿದ ಟಾಸ್ಕುಗಳೂ ಇಲ್ಲಿರುತ್ತವೆ.

ಇವೆಲ್ಲದರ ಜೊತೆಗೆ ಹಳ್ಳಿ ಸೆಟಪ್, ಕಾಲೇಜ್ ಸೆಟಪ್ ನಂಥ ಮೋಜಿನ ಥೀಮುಗಳೂ ನಿಮ್ಮನ್ನು ಈ ಶೋನಲ್ಲಿ ರಂಜಿಸಲಿವೆ. ಚುರುಕು ಬುದ್ಧಿ ಹಾಗೂ ದೈಹಿಕ ಶಕ್ತಿಗಳೆರಡನ್ನೂ ಒಟ್ಟಿಗೆ ಪರೀಕ್ಷೆಗೊಳಪಡಿಸುವ 'ಬಾಯ್ಸ್ ಗಿ/ಖ ಗರ್ಲ್ಸ್' ನ ಪ್ರತಿ ಸಂಚಿಕೆಯನ್ನೂ ವೀಕ್ಷಕರನ್ನು ತುದಿಗಾಲಲ್ಲಿ ಕೂರಿಸಲು ತಕ್ಕಂತೆ ರೂಪಿಸಲಾಗಿದೆ.

'ಬಾಯ್ಸ್ V/S ಗರ್ಲ್ಸ್' ಶೋನ ನಿರೂಪಣೆಯ ಹೊಣೆ ಹೊತ್ತಿರುವುದು ಚೈತನ್ಯದ ಚಿಲುಮೆ ಅನುಪಮಾ ಗೌಡ. ವಿನೂತನ ಫಾರ್ಮ್ಯಾಟ್ ಮತ್ತು ವಿಭಿನ್ನ ಸವಾಲುಗಳಿಂದ ಸಿದ್ಧಗೊಂಡಿರುವ 'ಬಾಯ್ಸ್ V/S ಗರ್ಲ್ಸ್' ನೋಡಲು ಮರೆಯಬೇಡಿ.

**'ಮಜಾ ಟಾಕೀಸ್' :**

ಟಾಕಿಂಗ್ ಸ್ಟಾರ್ ಸೃಜನ್ ಲೋಕೇಶ್ ಸಾರಥ್ಯದಲ್ಲಿ ಈಗಾಗಲೇ ಮೂರು ಯಶಸ್ವೀ ಸೀಸನ್ನುಗಳನ್ನು ಮುಗಿಸಿರುವ 'ಮಜಾ ಟಾಕೀಸ್' ಇದೀಗ ಮತ್ತೊಂದು ಹೊಸ ಸೀಸನ್ ಗೆ ತಯಾರಾಗಿದೆ. ಎಲ್ಲ ವಯಸ್ಸಿನ ವೀಕ್ಷಕರನ್ನೂ ಮರುಳು ಮಾಡುವ ಮಾತುಗಾರ ಸೃಜನ್ ಈ ಹೊಸ ಸೀಸನ್ನಿಗೆ ಹಲವು ಹೊಸ ಸಂಗತಿಗಳನ್ನು ಸೇರಿಸಿರುವುದು ಅಭಿಮಾನಿಗಳ ಕುತೂಹಲ ಕೆರಳಿಸಿದೆ.

ಮಜಾ ಮನೆಗೆ ಈ ಸಲ ಹೊಸ ಅತಿಥಿಗಳ ದಂಡೇ ಬಂದಿಳಿದಿದೆ. ವಿಶೇಷ ಅತಿಥಿಯಾಗಿ ಕಾಣಿಸಿಕೊಳ್ಳುತ್ತಿರುವ ನಿರ್ದೇಶಕ ಯೋಗರಾಜ ಭಟ್ರು ತಮ್ಮದೇ ಶೈಲಿಯ ಹುಡುಗಾಟಿಕೆಯನ್ನು ತಂದಿದ್ದಾರೆ. ಮಜಾ ಟಾಕೀಸಿನ ಹಳೇ ಹುಲಿಗಳಾದ ಕುರಿ ಪ್ರತಾಪ್ ಮತ್ತು ವಿಶ್ವ ತಮ್ಮ ಎಂದಿನ ತಮಾಷೆ ಮಾತುಗಳೊಂದಿಗೆ ತಯಾರಾಗಿದ್ದಾರೆ. ಅವರ ಪಂಚ್ ತುಂಬಿದ ಡೈಲಾಗುಗಳು ಮತ್ತು ಆಂಗಿಕ ಅಭಿನಯ ನಿಮ್ಮನ್ನು ಎಂದೂ ನಿರಾಸೆಗೊಳಿಸುವುದಿಲ್ಲ.

ಈ ಸಲದ ಮಜಾ ಟಾಕೀಸಿನಲ್ಲಿ ಹಲವು ಹೊಸ ಪಾತ್ರಗಳು ನಿಮ್ಮನ್ನು ಎದುರಾಗಲಿವೆ. ತಲೆ ತಿನ್ನುವ ಸೆಕ್ಯುರಿಟಿ ಗಾರ್ಡ್ ಆಗಿ ತುಕಾಲಿ ಸಂತೋಷ್, ವೈರಲ್ ಸೋಶಿಯಲ್ ಮೀಡಿಯಾ ಸೆನ್ಸೇಶನ್ ಆಗಿ ಪಿಕೆ ನಿಮ್ಮನ್ನು ರಂಜಿಸಿದರೆ, ಎದುರು ಮನೆಯ ಕಿರಿಕ್ ಅಜ್ಜಿಯಾಗಿ ಚಂದ್ರಪ್ರಭಾ ಎಲ್ಲರನ್ನೂ ಕಾಡಲಿದ್ದಾರೆ. ಕಲರ್ಸ್ ನ ಮತ್ತೊಂದು ಸುಪರ್ ಹಿಟ್ ಶೋ 'ಗಿಚ್ಚಿಗಿಚ್ಚಿ ಗಿಲಿಗಿಲಿ'ಯ ಪ್ರತಿಭೆಗಳಾದ ಶಿವು, ವಿನೋದ್ ಗೊಬ್ಬರಗಾಲ, ಸೌಮ್ಯ ಮತ್ತು ಪ್ರಿಯಾಂಕಾ ಕಾಮತ್ ಎಡೆಬಿಡದೆ ನಗಿಸಲಿದ್ದಾರೆ.

ಇವರಷ್ಟೇ ಅಲ್ಲದೆ, ದೀಪಾ ಭಾಸ್ಕರ್, ಮಿಮಿಕ್ರಿ ಗೋಪಿ, ಶ್ರೀ ಭವ್ಯ ಮತ್ತು ಅಗ್ನಿಸಾಕ್ಷಿ ಖ್ಯಾತಿಯ ಪ್ರಿಯಾಂಕ ಕೂಡ ನಿಮ್ಮ ಖುಷಿಯನ್ನು ದುಪ್ಪಟ್ಟು ಮಾಡಲು ಕಾದಿದ್ದಾರೆ.

ಬರೀ ಮನೆಯೊಳಗಿನ ಪಾತ್ರಗಳಷ್ಟೇ ಅಲ್ಲ, ಈ ಸೀಸನ್ನಿನಲ್ಲಿ ಮಜಾ ಮನೆಗೆ ಬರಲಿರುವ ಅತಿಥಿಗಳ ಪಟ್ಟಿಯೂ ಹೊಸ ರೀತಿ ಇರಲಿದೆ. ಚಿತ್ರ ತಾರೆಗಳಷ್ಟೇ ಅಲ್ಲದೆ, ಈ ಸಲ ಮಜಾ ಮನೆಗೆ ವಿವಿಧ ಕ್ಷೇತ್ರಗಳ ಜನಪ್ರಿಯ ಸಾಧಕರು ಅತಿಥಿಗಳಾಗಿ ಬರಲಿದ್ದಾರೆ. ಕ್ರೀಡಾ ತಾರೆಗಳು, ರಾಜಕಾರಣಿ, ಉದ್ಯಮಿಗಳನ್ನು ಸಹ ನೀವಿಲ್ಲಿ ಎದುರು ನೋಡಬಹುದು. ಅವರ ಜೀವನಾನುಭವದ ಮಾತುಗಳನ್ನು ಕಚಗುಳಿಯಿಡುವ ಮಾತುಕತೆಯ ಮುಖಾಂತರ ಹೊರ ಹಾಕಲಿದ್ದಾರೆ ನಿರೂಪಕ ಸೃಜನ್ ಲೋಕೇಶ್.

ಪ್ರತಿ ಎಪಿಸೋಡ್ ನಂತರ ಕೇಳಲಾಗುವ ಸರಳ ಪ್ರಶ್ನೆಗೆ ಸರಿಯುತ್ತರ ನೀಡಿದ ಅದೃಷ್ಟಶಾಲಿಗೆ ಬಹುಮಾನ ನೀಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

# ರಂಗೋಲಿ ಚಿತ್ತಾರದೊಂದಿಗೆ ಜ್ಯೋತಿ ರಥಯಾತ್ರೆಗೆ ಸ್ವಾಗತ

**■ ವಿಜಯಸಾಕ್ಷಿ ಸುದ್ದಿ, ಗದಗ**

ಶ್ರೀ ಸಿದ್ಧಾರೂಢ ಸ್ವಾಮಿಗಳ ಜ್ಯೋತಿ ರಥಯಾತ್ರೆಯು ಗದಗ-ಬೆಟಗೇರಿ ನಗರಸಭೆಯ 27ನೇ ವಾರ್ಡಿನ ಕಾಶಿ ವಿಶ್ವನಾಥ ನಗರದಲ್ಲಿ ಸಂಚರಿಸಿದಾಗ ಬಡಾವಣೆಯ ನಗರಸಭಾ ಸದಸ್ಯರಾದ ಲಲಿತಾ ಬಿ. ಅಸೂಟಿಯವರ ನೇತೃತ್ವದಲ್ಲಿ ಬಡಾವಣೆಯ ಮಹಿಳೆಯರು ಪ್ರಮುಖ ಬೀದಿಗಳಲ್ಲಿ ವೈವಿಧ್ಯಮಯ ರಂಗೋಲಿ



ಚಿತ್ತಾರವನ್ನು ಹಾಕುವದರೊಂದಿಗೆ ಸ್ವಾಗತಿಸಿದರು.

ಈ ಸಂದರ್ಭದಲ್ಲಿ 27ನೇ ವಾರ್ಡಿನ ಪ್ರಮುಖರಾದ ದುಂಡಪ್ಪ ಆಸಂಗಿ, ಗದಗ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ರಮೇಶ ಅಣ್ಣಿಗೇರಿ, ಶಾಂತಪ್ಪ ಅಕ್ಕಿ, ಚನ್ನವೀರಪ್ಪ ಮಳಗಿ, ಮಹಾಲಿಂಗಪ್ಪ ಬರಬರಿ. ನಿಂಗಪ್ಪ ಹೈದರಿ. ರಾಚಪ್ಪ ಗಡಾದ, ಶರಣಪ್ಪ ಹುಣಸಿಕಟ್ಟಿ, ಕಳಕಪ್ಪ ಕಡಬಲಕಟ್ಟಿ, ಸಂಗಪ್ಪ ಲೆಬಗೇರಿ, ಮಂಜುನಾಥ್ ಮಡಿವಾಳ, ದ್ರಾಕ್ಷಾಯಿಣಿ ಹೈದರಿ, ಗೌರವ್ವ ಹುಣಸಿಕಟ್ಟಿ, ಲಲಿತಾ ಬಳ್ಳಾರಿ, ಅಕ್ಷತಾ ಅಸೂಟಿ, ಅಂದಮ್ಮ ಕುರಹಟ್ಟಿ, ಅಪರ್ಣ ಅಸೂಟಿ, ಗಂಗಮ್ಮ ಅಣ್ಣಿಗೇರಿ, ಭಾರತಿ ಇಂಗಳೇಶ್ವರ್, ಭಾರತಿ ಗೌಡರ ಇನ್ನಿತರರು ಉಪಸ್ಥಿತರಿದ್ದರು.

# ಎನ್.ಎಸ್.ಎಸ್ ಶಿಬಿರದ ಉದ್ಘಾಟನೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ತಾಂತ್ರಿಕ ಶಿಕ್ಷಣ ಇಲಾಖೆ ಮತ್ತು ಅಂಜುಮನ್-ಎ-ಇಸ್ಲಾಂ ಪಾಲಿಟೆಕ್ನಿಕ್ ಆಶ್ರಯದಲ್ಲಿ ಕಳಸಾಪೂರ ಗ್ರಾಮದಲ್ಲಿ ಎನ್.ಎಸ್.ಎಸ್. ಶಿಬಿರ ಹಮ್ಮಿಕೊಳ್ಳಲಾಗಿತ್ತು.

ಗದುಗಿನ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಾದ ವಿಶಾಲ ಪವಾರ, ಅಂಜುಮನ್-ಎ-ಇಸ್ಲಾಂ ಪಾಲಿಟೆಕ್ನಿಕ್ ಪ್ರಾಚಾರ್ಯ ಕೆ.ಎನ್ ರೇವಣಕರ, ಎನ್.ಎಸ್.ಎಸ್ ಶಿಬಿರದ ನಿರ್ದೇಶಕ



ಕುಮಾರಸ್ವಾಮಿ ಹಿರೇಮಠ, ಶಿಬಿರಾಧಿಕಾರಿ ಆರ್.ಎಸ್. ಲಾಯದಗುಂದಿ ಕಾರ್ಯಕ್ರಮ ಉದ್ಘಾಟಿಸಿದರು.

ಪ್ರಾದೇಶಿಕ ಸಾರಿಗೆ ಅಧಿಕಾರಿ ವಿಶಾಲ ಪವಾರ ಮಾತನಾಡಿ, ರಸ್ತೆ ಸುರಕ್ಷತೆ ಮತ್ತು ರಸ್ತೆ ನಿಯಮಗಳನ್ನು ಪಾಲಿಸದೇ ಇದ್ದರೆ ಆಗುವ ಅನಾಹುತಗಳ ಬಗ್ಗೆ ಉಪನ್ಯಾಸ ಮತ್ತು ವಿಡಿಯೋಗಳ ಮುಖಾಂತರ ತಿಳಿಸಿದರು.

ರಾಜು ಬೆನಕನಕೊಂಡ, ಎ.ಎಮ್. ಮುಲ್ಲಾ, ಎಸ್.ಎ. ತಡೂಳ, ಜಿ.ವಾಯ್. ಹಳ್ಳಿಕೇರಿ, ಎಸ್.ಬಿ. ಅಫಘಾನ, ಜಹೀರ ಕಮಾನಗಾರ, ಜಿ.ಎನ್. ಕಬಾಡಿ, ಎಸ್.ಎ. ಮಕರಬ್ಬಿ, ಎಸ್. ಎಮ್. ಬಿಜಾಪೂರ, ಆನಂದ ಹಿರೇಮಠ, ಜಾಕೀರ ತಂಬಾಕದ, ಎಮ್.ಎ. ಮನಿಯಾರ ಉಪಸ್ಥಿತರಿದ್ದರು.

## ಸಹಕಾರಿ ಕ್ಷೇತ್ರದಿಂದ ಕ್ರಾಂತಿಕಾರಕ ಬದಲಾವಣೆ ಸಾಧ್ಯ



■ವಿಜಯಸಾಕ್ಷಿ ಸುದ್ದಿ, ಗದಗ

ಒಂದು ಸಹಕಾರಿ ಸಂಘ ಬೆಳೆದರೆ ಸಂಘಟನಾತ್ಮಕವಾಗಿ ಹಾಗೂ ಸಮಾಜದ ಸರ್ವಾಂಗೀಣ ಅಭಿವೃದ್ಧಿ ಸಾಧ್ಯವಗುತ್ತದೆ ಎಂದು ಮಾಜಿ ಶಾಸಕ ಡಿ.ಆರ್. ಪಾಟೀಲ ಹೇಳಿದರು. ನಗರದಲ್ಲಿ ಶ್ರೀ ಸಮೃದ್ಧಿ ಸೌಹಾರ್ದ ಸಹಕಾರಿ ನಿಯಮಿತದ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಪ್ರಾಮಾಣಿಕತೆ ಹಾಗೂ ಸೇವಾ ಮನೋಭಾವನೆಯಿಂದ ಶ್ರಮಿಸಿದರೆ ಸಹಕಾರಿ ಕ್ಷೇತ್ರದಿಂದ ಕ್ರಾಂತಿಕಾರಕ ಬದಲಾವಣೆಯಾಗುವುದು. ಜನರ ಅಗತ್ಯತೆಗಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಎಲ್ಲರೂ ಸೇರಿ ಸಂಘವನ್ನು ಬೆಳೆಸುವ ಅಗತ್ಯವಿದೆ ಎಂದರು.

ಯುವ ಕಾಂಗ್ರೆಸ್ ಪ್ರದಾನ ಕಾರ್ಯದರ್ಶಿ ಕೃಷ್ಣಗೌಡ ಪಾಟೀಲ ಸೌಹಾರ್ದ ಸಹಕಾರ ಸಂಘವನ್ನು ಉದ್ಘಾಟಿಸಿ ಮಾತನಾಡಿ, ಬಡವರು, ಆರ್ಥಿಕವಾಗಿ ಹಿಂದುಳಿದವರು ಹಾಗೂ ಶ್ರಮಜೀವಿಗಳ ಸ್ವಾವಲಂಬನೆಯ ಉದ್ದೇಶದಿಂದ ಪ್ರಾರಂಭವಾದ ಸಮೃದ್ಧಿ ಸಹಕಾರ ಸಂಘ ಉತ್ತರೋತ್ತರವಾಗಿ ಬೆಳೆಯಲಿ. ಆ ನಿಟ್ಟಿನಲ್ಲಿ ಸಹಕಾರ ಕ್ಷೇತ್ರದಲ್ಲಿ ಅನುಭವ ಹೊಂದಿರುವ ಹಿರಿಯರು ಕೂಡಿಕೊಂಡು ಸ್ಥಾಪನೆ ಮಾಡಿರುವ ಸಂಸ್ಥೆ ಉನ್ನತ ಹಂತ ತಲುಪಲಿ ಎಂದರು. ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ನಾಗರಾಜ ದೇಶಪಾಂಡೆ, ಉಪಾಧ್ಯಕ್ಷರಾದ ಕೆ.ಸಿ. ಜೋಷಿ, ಮುಖ್ಯ ಕಾರ್ಯನಿರ್ವಹಣ ಅಧಿಕಾರಿ ಜಿ.ವಿ. ಸುಬ್ಬಣ್ಣಬರ, ನಿರ್ದೇಶಕರಾದ ಹರ್ಷಲಾ ದೇಶಪಾಂಡೆ, ಸುನಿಲ ಅಗರವಾಲ, ಸಂತೋಷ ದೇಶಪಾಂಡೆ, ಚೇತನ ಬಂಡಿ, ಎಂ.ಎಂ. ಮುಲ್ಲಾ, ಸಂಗಮೇಶ ಅಕ್ಕಿ, ಬಾಷಾ ಸುಂಕದ, ಹೇಮಾ ಜೋಷಿ, ಸುಬ್ಬನಗೌಡ ಆದಪ್ಪಗೌಡ್ರ, ಸೇರಿದಂತೆ ಸಹಕಾರಿ ಸಂಘಗಳ ಪ್ರತಿನಿಧಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

### ಧ.ಗ್ರಾ ಯೋಜನೆಯ ತಾಲೂಕು ಮಟ್ಟದ ಮಹಿಳಾ ವಿಚಾರಗೋಷ್ಠಿ ಉದ್ಘಾಟಿಸಿದ ಶಾಸಕ ಡಾ. ಚಂದ್ರು ಲಮಾಣಿ


# ಧರ್ಮಸ್ಥಳ ಸಂಸ್ಥೆಯ ಕಾರ್ಯ ಶ್ಲಾಘನೀಯ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಮತಕ್ಷೇತ್ರದ ಜನತೆಯ ಒಳಿತಿಗಾಗಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ಕಾರ್ಯಗಳು ಶ್ಲಾಘನೀಯವಾಗಿದ್ದು, ಸಂಸ್ಥೆಯಅನೇಕ ಸಮಾಜಮುಖಿ ಕಾರ್ಯಗಳಿಂದ ಜನತೆಗೆ ಅನುಕೂಲವಾಗಿವೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಶನಿವಾರ ಶಿರಹಟ್ಟಿಯ ಶ್ರೀ ಮಹರ್ಷಿ ವಾಲ್ಮೀಕಿ ಸಮಯದಾಯ ಭವನದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್ ಶಿರಹಟ್ಟಿ/ಲಕ್ಷ್ಮೇಶ್ವರ ತಾಲೂಕು ಮಟ್ಟದ ಮಹಿಳಾ ವಿಚಾರಗೋಷ್ಠಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಸಂಸ್ಥೆಯ ವತಿಯಿಂದ ಈಗಾಗಲೇ ಮತಕ್ಷೇತ್ರದಲ್ಲಿ ಹಲವಾರು ದೇವಸ್ಥಾನಗಳ ಅಭಿವೃದ್ಧಿ ಮಾಡಲಾಗಿದೆ. ಕೆರೆಗಳ ಅಭಿವೃದ್ಧಿ, ನಿರ್ಗತಿಕರಿಗೆ ಮನೆ ಕಟ್ಟಿಕೊಡುವಂತಹ ಕೆಲಸಗಳು ಸೇರಿದಂತೆ ಅನೇಕ ಕೆಲಸಗಳನ್ನು ಮಾಡುತ್ತಿದ್ದು, ನಮ್ಮ ಭಾಗದಲ್ಲಿ ಬಹುತೇಕ ಕುಟುಂಬಗಳು ಸ್ವಾವಲಂಬಿ ಬದುಕನ್ನು ಸಾಗಿಸಲು ಅವರಿಗೆ ಆರ್ಥಿಕವಾಗಿ ಸಹಾಯ ಮಾಡಿದೆ. ಇತ್ತೀಚಿನ ದಿನಗಳಲ್ಲಿ ಮಹಿಳೆಯರಿಗೆ ಸ್ತನ ಕ್ಯಾನ್ಸರ್‌ನಂತಹ ರೋಗಗಳಿಗೆ ತುತ್ತಾಗುತ್ತಿದ್ದು, ಈ ಬಗ್ಗೆ ಯಾವುದೇ ಮುಜುಗರಕ್ಕೆ ಒಳಗಾಗಬಾರದು. ತಜ್ಞರ ಹತ್ತಿರ ಹೋಗಿ ತಪಾಸಣೆ ಮಾಡಿಸಿಕೊಳ್ಳಬೇಕು. ಈ ಬಗ್ಗೆ ವಿದ್ಯಾವಂತ ಮಹಿಳೆಯರು ಹೆಚ್ಚಿನ ಜಾಗೃತಿ ಮಾಡಬೇಕು ಎಂದರು.



ಬಿಪಿ/ಶುಗರ್ ಇದ್ದವರು ಸಮರ್ಪಕ ಆಹಾರ ಪದ್ಧತಿಯನ್ನು ಪಾಲನೆ ಮಾಡಬೇಕು. ಆರೋಗ್ಯದ ಕಡೆಗೆ ಹೆಚ್ಚಿನ ಗಮನ ಹರಿಸಿ. ಒತ್ತಡದಲ್ಲಿ ಕೆಲಸ ಮಾಡಬಾರದು. ಇದಕ್ಕಾಗಿ ಅಗತ್ಯ ವ್ಯಾಯಾಮ ಮತ್ತು ಯೋಗವನ್ನು ಮಾಡಬೇಕು. 22 ವರ್ಷಕ್ಕೆಲ್ಲಾ ಹೃದಯ ಸಂಬಂಧಿ ಕಾಯಿಲೆಗಳಿಂದ ಮೃತಪಡುತ್ತಿರುವುದು ವಿಷಾದನೀಯ. ಆದ್ದರಿಂದ ತಾಯಂದಿರು ತಮ್ಮ ಮಕ್ಕಳ ಆರೋಗ್ಯದ ಕಡೆಗೆ ಹೆಚ್ಚು ಗಮನ ಹರಿಸಬೇಕು. ಯಾವುದೇ ಕಾರಣಕ್ಕೂ ಸಂಬಂಧಗಳಲ್ಲಿ ಮದುವೆ ಮಾಡಲು ಮುಂದಾಬೇಡಿ. ಇದರಿಂದ ಬುದ್ಧಿಮಾಂದ್ಯ ಮಕ್ಕಳು ಹುಟ್ಟುತ್ತಿದ್ದಾರೆ. ಇಂತಹುದಕ್ಕೆ ಅವಕಾಶವನ್ನು ಕಲ್ಪಿಸಬಾರದು. ಪ್ರತಿಯೊಬ್ಬರೂ ಶೌಚಾಲಯ ನಿರ್ಮಿಸಿಕೊಳ್ಳಿ, ಬಯಲು ಬಹಿರ್ದೆಸೆ ಮುಕ್ತಗೊಳಿಸಿ ಎಂದು ಹೇಳಿದರು.

ಜಿಲ್ಲಾ ಜನಜಾಗೃತಿ ವೇದಿಕೆ ನಿಕಟಪೂರ್ವ ಅಧ್ಯಕ್ಷ ಶಿವಪ್ರಕಾಶ ಮಹಾಜನಶೆಟ್ಟರ ಮಾತನಾಡಿ, ಸರಕಾರ ಮಾಡುವ ಬಹುತೇಕ ಕೆಲಸಗಳನ್ನು ಡಾ. ವೀರೇಂದ್ರ ಹೆಗ್ಗಡೆಯವರ ಮಾರ್ಗದರ್ಶನದಲ್ಲಿ ಸಂಸ್ಥೆಯು ಮಾಡುತ್ತಾ ಬಂದಿದ್ದು, ಗ್ರಾಮೀಣ ಭಾಗದ ಜನತೆಯ ಬದುಕನ್ನು ಹಸನುಗೊಳಿಸುವುದಕ್ಕಾಗಿ, ಅವರನ್ನು ಆರ್ಥಿಕವಾಗಿ ಸಬಲರನ್ನಾಗಿಸುವ ಕೆಲಸ ನಿರಂತರವಾಗಿ ನಡೆಯುತ್ತಾ ಬಂದಿದೆ. ಮಹಿಳಾ ವಿಚಾರಗೋಷ್ಠಿಯು ಮುಂದಿನ ದಿನಗಳಲ್ಲಿ ಮಹಿಳೆಯರು ಮತ್ತು ತಜ್ಞರೊಂದಿಗೆ ಮುಕ್ತವಾಗಿ ಅವರ ಸಮಸ್ಯೆಗಳನ್ನು ಹಂಚಿಕೊಳ್ಳುವುದಕ್ಕೆ ಸಂವಾದ ಕಾರ್ಯಕ್ರಮ ಏರ್ಪಡಿಸುವಂತೆ ಸಂಸ್ಥೆಯ ಸಿಬ್ಬಂದಿಗೆ ಸೂಚಿಸಿದರು.

ಪ.ಪಂ ಅಧ್ಯಕ್ಷೆ ದೇವಕ್ಕ ಗುಡಿಮನಿ ಅಧ್ಯಕ್ಷತೆ ವಹಿಸಿದ್ದರು. ಜಿಲ್ಲಾ ನಿರ್ದೇಶಕ ಯೋಗೀಶ ಎ, ಮಹಾಂತೇಶ ದಶಮನಿ, ಫಕ್ಕೀರೇಶ ರಟ್ಟಿಹಳ್ಳಿ, ಅಶೋಕ ವರವಿ, ಕೆ.ಎ. ಬಳಿಗೇರ, ದೀಪಾ ಬಿಂಕದಕಟ್ಟಿ, ಕ್ಷೇತ್ರ ಯೋಜನಾಧಿಕಾರಿ ಪುನೀತ ಓಲೇಕರ, ಮಮತಾ ಎಸ್ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.



ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘದ ಗದಗ ಜಿಲ್ಲಾ ಶಹರ ಘಟಕದ ಅಧ್ಯಕ್ಷ ಬಿ.ಕೆ. ನಿಂಬನಗೌಡರ, ಕಾರ್ಯದರ್ಶಿ ಗಿರೀಶ ನರಗುಂದ, ಜಿಲ್ಲಾ ಘಟಕದ ಉಪಾಧ್ಯಕ್ಷ ಬೂದಪ್ಪ ಅಂಗಡಿ ಹಾಗೂ ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘದ ಹಿರಿಯ ಸದಸ್ಯ ರವಿ (ರಾಜೇಶ) ಕೊಣ್ಣೂರು ಸೇರಿ ಗದಗ ಶಹರಕ್ಕೆ ನೂತನವಾಗಿ ಆಗಮಿಸಿದ ಕ್ಷೇತ್ರ ಶಿಕ್ಷಣಾಧಿಕಾರಿ ರವಿ ಶೆಟ್ಟೆಪ್ಪನವರ ಅವರನ್ನು ಗದಗ ಶಹರದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದಲ್ಲಿ ಸನ್ಮಾನಿಸಿದರು.

# ಸದಸ್ಯತ್ವ ನೋಂದಣಿಗೆ ಕಾಲಾವಧಿ ವಿಸ್ತರಿಸಲು ಮನವಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅಂಜುಮನ್ ಸಂಸ್ಥೆಯ ಚುನಾವಣೆಗಾಗಿ ವಕ್ಫ್ ಬೋರ್ಡ್‌ನಿಂದ ಸದಸ್ಯತ್ವ ನಡೆಸಲಾಗುತ್ತಿದ್ದು, ಸದಸ್ಯತ್ವ ನೋಂದಣೆಗೆ ಕಾಲಾವಧಿಯನ್ನು ವಿಸ್ತರಿಸಬೇಕೆಂದು ಆಗ್ರಹಿಸಿ ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾದ ಮುಖಂಡರು ಜಿಲ್ಲಾ ವಕ್ಫ್ ಬೋರ್ಡ್ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಪಾರ್ಟಿಯ ಅಧ್ಯಕ್ಷರಾದ ಜೀವನಸಾಬ ಉಮಚಗಿ ಮನವಿ ಸಲ್ಲಿಸಿ ಮಾತನಾಡಿ, ಗದಗ ಜಿಲ್ಲೆಯಲ್ಲಿ ಅತೀ ಹೆಚ್ಚು ಮುಸ್ಲಿಂ ಸಮುದಾಯ ಜನರು ಗದಗ-ಬೆಟಗೇರಿ ನಗರದಲ್ಲಿ ವಾಸವಾಗಿದ್ದಾರೆ.



ನಮ್ಮ ಸಮುದಾಯದ ದೊಡ್ಡ ಸಂಸ್ಥೆಯಾದ ಗದಗ-ಬೆಟಗೇರಿ ಅಂಜುಮನ್-ಎ-ಇಸ್ಲಾಂ ಸಂಸ್ಥೆಯ ಚುನಾವಣೆ ನಡೆಸಲು ಜಿಲ್ಲಾ ವಕ್ಫ್ ಬೋರ್ಡ್‌ನಿಂದ ಚುನಾವಣಾಧಿಕಾರಿಯನ್ನು ನೇಮಿಸಲಾಗಿದೆ. ಅಧಿಕಾರಿಗಳು ಈಗಾಗಲೇ ಎಸ್.ಎಂ. ಕೃಷ್ಣಾ ನಗರದಲ್ಲಿರುವ ಅಂಜುಮನ್ ಸಂಸ್ಥೆಯ ಕಾರ್ಯಾಲಯದಲ್ಲಿ ಚುನಾವಣೆಗಾಗಿ ಸದಸ್ಯತ್ವ ನೋಂದಣೆ ಕಾರ್ಯವನ್ನು ಪ್ರಾರಂಭಿಸಿದ್ದಾರೆ.

ಸದಸ್ಯತ್ವ ನೋಂದಣಿ ಮಾಡಿಕೊಳ್ಳಲು 20-02-2025ರವರೆಗೆ ಸಮಯ ನೀಡಲಾಗಿದೆ. ಗದಗ-ಬೆಟಗೇರಿ ನಗರದ ಮುಸ್ಲಿಂ ಸಮಾಜದ ಜನಸಂಖ್ಯೆಗೆ ಅನುಗುಣವಾಗಿ ಹೆಚ್ಚಿನ ಕಾಲಾವಕಾಶ ನೀಡಬೇಕು. ನಗರದ ಮಧ್ಯಭಾಗದಲ್ಲಿರುವ ಎಸ್.ಎಂ. ಕೃಷ್ಣಾ ನಗರದಲ್ಲಿರುವ ಅಂಜುಮನ್ ಸಂಸ್ಥೆಯ ಕಾರ್ಯಾಲಯದಲ್ಲಿಯೇ ಸದಸ್ಯತ್ವ ನೋಂದಣಿ ಕಾರ್ಯವನ್ನು ನಡೆಸಬೇಕು ಎಂದು ಒತ್ತಾಯಿಸಿದರು.

ರಶೀದ ಗೋಕಾವಿ, ಉಜೇಪಾ ಉಮಚಗಿ, ಮೆಹಬೂಬ ರೋಣ, ನಫೀಸ ಮಕಾನದಾರ, ಮುಸ್ತಾಫಾ ಶರಹಟ್ಟಿ ಮುಂತಾದವರು ಮನವಿ ನೀಡುವ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ರೋಣ

ರೋಣ ತಾಲೂಕಾ ಪಿಎಲ್‌ಡಿ ಬ್ಯಾಂಕ್‌ಗೆ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಬೆಂಬಲಿತ ಅಭ್ಯರ್ಥಿಗಳು 14 ಸ್ಥಾನಗಳನ್ನು ಗೆಲ್ಲುವ ಮೂಲಕ ಅಧಿಕಾರದ ಚುಕ್ಕಾಣಿ ಹಿಡಿದಿದ್ದರು. ಶನಿವಾರ ಅಧ್ಯಕ್ಷ-ಉಪಾಧ್ಯಕ್ಷ ಸ್ಥಾನಗಳಿಗೆ ಚುನಾವಣೆ ನಡೆದು ಶಾಸಕ ಜಿ.ಎಸ್. ಪಾಟೀಲರ ಮಾರ್ಗದರ್ಶನದಂತೆ ಈ ಎರಡೂ ಸ್ಥಾನಗಳು ಅವಿರೋಧವಾಗಿ ಆಯ್ಕೆಗೊಂಡವು.

ಸತತ ಐದು ಬಾರಿ ನಿಡಗುಂದಿ ಸಾಲಗಾರ ಕ್ಷೇತ್ರದಿಂದ ಗೆದ್ದು ಬರುತ್ತಿರುವ ರಮೇಶ ಪಲ್ಲೇದರವರಿಗೆ ಅಧ್ಯಕ್ಷ ಸ್ಥಾನ ಒಲಿದು ಬಂದರೆ, ಮೊದಲ ಬಾರಿಗೆ ಹೊಳೆಆಲೂರ ಕ್ಷೇತ್ರದಿಂದ ಚುನಾಯಿತರಾದ ಯಚ್ಚರಗೌಡ ಗೋವಿಂದಗೌಡ್ರರವರಿಗೆ ಉಪಾಧ್ಯಕ್ಷ ಸ್ಥಾನ ಒಲಿದು ಬಂದಿತು. ಮುಖ್ಯವಾಗಿ ನಿಡಗುಂದಿ ಕ್ಷೇತ್ರಕ್ಕೆ 33 ವರ್ಷಗಳ ನಂತರ ಅಧ್ಯಕ್ಷ ಸ್ಥಾನ ಒಲಿದು ಬಂದಿದ್ದು, ಈ ಭಾಗದ ಮುಖಂಡರುಗಳ ಆಸೆ ಈಡೇರಿದಂತಾಗಿದೆ.



ನೂತನ ಅಧ್ಯಕ್ಷ ಜಕ್ಕಲಿ ಗ್ರಾಮದ ರಮೇಶ ಪಲ್ಲೇದರವರ ತಂದೆ ಎಸ್.ಎಸ್. ಪಲ್ಲೇದ ಕೂಡ ಸತತ ನಾಲ್ಕು ಬಾರಿ ಸದಸ್ಯರಾಗುವ ಮೂಲಕ 1992ರಲ್ಲಿ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದರು. ನಂತರ ಜಕ್ಕಲಿ ಗ್ರಾಮಕ್ಕೆ ಅಥವಾ ನಿಡಗುಂದಿ ಕ್ಷೇತ್ರಕ್ಕೆ ಅಧ್ಯಕ್ಷ ಸ್ಥಾನ ಸಿಕ್ಕಿರಲಿಲ್ಲ. ಆದರೆ 33 ವರ್ಷಗಳ ನಂತರ ತಂದೆ ಅಲಂಕರಿಸಿದ್ದ ಸ್ಥಾನವನ್ನು ಅಲಂಕರಿಸುವ ಮೂಲಕ ನವ ಚೈತನ್ಯ ಮೂಡಿಸಿದ್ದಾರೆ.

ಅಧ್ಯಕ್ಷ-ಉಪಾಧ್ಯಕ್ಷ ಸ್ಥಾನ ಘೋಷಣೆಯಾಗುತ್ತಿದ್ದಂತೆ ಪಕ್ಷದ ಮುಖಂಡರು, ಕಾರ್ಯಕರ್ತರು, ಅಭಿಮಾನಿಗಳು ಪಟಾಕಿ ಸಿಡಿಸಿ ಸಂಭ್ರಮ ವ್ಯಕ್ತಪಡಿಸಿದರು.

ಜಿ.ಪಂ ಮಜಿ ಸದಸ್ಯ ಎಸ್. ಎಚ್. ಹಾದಿಮನಿ, ತಾ.ಪಂ ಮಾಜಿ ಸದಸ್ಯರಾದ ಅಂದಪ್ಪ ಬಿಚ್ಚೂರ, ಮಲ್ಲಣ್ಣ ಮೇಟಿ, ಸಂದೇಶ ದೊಡ್ಡಮೇಟಿ, ಮುತ್ತು ಮೇಟಿ, ಪಕ್ಕಿರಪ್ಪ ಕುಕನೂರ, ಬಂದು ಗಡಾದ, ಅಡಿವೆಪ್ಪ ಜಿಗಳೂರ, ಅಲ್ಲಾಸಾಬ ಮೋತೆಖಾನ್, ಡಿ.ಡಿ. ದೋಟಿಹಾಳ, ರಿಯಾಜ ಆಲೂರ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು.

## ದೆಹಲಿಯಲ್ಲಿ ಬಿಜೆಪಿ ಜಯಭೇರಿ: ಬಿಜೆಪಿಯಿಂದ ವಿಜಯೋತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಕ್ಷ ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ 26ವರ್ಷಗಳ ನಂತರ ಅಧಿಕಾರದ ಗದ್ದುಗೆ ಹಿಡಿದ ಹಿನ್ನಲೆಯಲ್ಲಿ ಜಿಲ್ಲಾ ಬಿಜೆಪಿ, ಗದಗ ಬಿಜೆಪಿ ಶಹರ ಘಟಕ, ಜಿಲ್ಲಾ ಯುವ ಮೋರ್ಚಾ, ಮಹಿಳಾ ಮೋರ್ಚಾದಿಂದ ನಗರದ ಹುಯಿಲಗೋಳ ನಾರಾಯಣರಾವ್ (ಟಾಂಗಾಕೂಟ್) ವೃತ್ತದಲ್ಲಿ ಪಟಾಕಿ ಸಿಡಿಸಿ, ಸಿಹಿ ಹಂಚುವ ಮೂಲಕ ವಿಜಯೋತ್ಸವ ಆಚರಿಸಿದರು.

ಈ ವೇಳೆ ಬಿಜೆಪಿ ಹಿರಿಯ ಮುಖಂಡ ಎಂ. ಎಸ್ ಕರಿಗೌಡ್ರ ಮಾತನಾಡಿ, ಬಿಜೆಪಿ ಕಾರ್ಯಕರ್ತರಿಗೆ ಹಬ್ಬದ ದಿನವಾಗಿದೆ. ದೆಹಲಿಯಲ್ಲಿ 15ವರ್ಷ ಕಾಂಗ್ರೆಸ್ ನ ಶೀಲಾ ದೀಕ್ಷಿತ್ ಹಾಗೂ 10ವರ್ಷ ಆಮ್ ಆದ್ಮಿ ಪಕ್ಷ ಅಧಿಕಾರ ನಡೆಸಿದ್ದವು. ಆದರೆ, ಅವರ ಭ್ರಷ್ಟಾಚಾರದಿಂದ ಬೇಸತ್ತ ದೆಹಲಿ ಜನತೆ ಬಿಜೆಪಿಗೆ ಈ ಬಾರಿ ಆಶೀರ್ವಾದ ಮಾಡಿದ್ದಾರೆ. ಭ್ರಷ್ಟಾಚಾರ ನಿರ್ಮೂಲನೆ ನೆಪದಲ್ಲಿ ಅಧಿಕಾರಕ್ಕೆ ಬಂದ ಆಮ್ ಆಮ್ ಆದ್ಮಿ ಪಕ್ಷ ಭ್ರಷ್ಟಾಚಾರದಲ್ಲಿ ಮುಳಗಿತ್ತು ಎಂದು ಆರೋಪಿಸಿದರು.



ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ, ನಗರಸಭೆ ಸದಸ್ಯರಾದ ಅನಿಲ ಅಬ್ಬಿಗೇರಿ, ರಾಘವೇಂದ್ರ ಯಳವತ್ತಿ, ಮುತ್ತಣ್ಣ ಮುಶಿಗೇರಿ, ಹಿರಿಯ ಮುಖಂಡ ಅಶೋಕ ನವಲಗುಂದ, ಶ್ರೀಪತಿ ಉಡುಪಿ, ಗಂಗಾಧರ ಮೇಲಗಿರಿ, ಶಂಕರ ಮಲ್ಲಸಮುದ್ರ, ಇರ್ಷಾದ್ ಮಾನ್ವಿ, ರಮೇಶ್ ಸಜ್ಜಗಾರ, ವಿನಾಯಕ ಹಬೀಬ, ಜಗನ್ನಾಥಸಾ ಭಾಂಡಗೆ, ಬಿ. ಎಚ್ ಲದ್ವಾ, ಬಸವಣ್ಣೆಪ್ಪ ಚಿಂಚಲಿ, ವಿಜಯಲಕ್ಷ್ಮೀ ಮಾನ್ವಿ, ಸುರೇಶ ಹೆಬಸೂರ, ಜಯಶ್ರೀ ಅಣ್ಣಿಗೇರಿ, ಗಂಗಾಧರ ಹಬೀಬ, ರಮೇಶ ಹತ್ತಿಕಾಳ, ಕುಮಾರ ಮಾರನಬಸರಿ, ಕೆ. ಪಿ ಕೋಟಿಗೌಡ್ರ, ಲಿಂಗರಾಜ ಪಾಟೀಲ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಬಿಎಸ್‌ಸಿ ನರ್ಸಿಂಗ್‌ನಲ್ಲಿ ಅತ್ಯುತ್ತಮ ಫಲಿತಾಂಶ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಬೆಂಗಳೂರು ಇದರ ವತಿಯಿಂದ ಡಿಸೆಂಬರ್ 2024-25ನೇ ಸಾಲಿನಲ್ಲಿ ನಡೆದ ನಾಲ್ಕನೇ ಸೆಮಿಸ್ಟರ್‌ನ ಬಿಎಸ್‌ಸಿ ನರ್ಸಿಂಗ್ ವಾರ್ಷಿಕ ಪರೀಕ್ಷೆಯ ಫಲಿತಾಂಶ ಪ್ರಕಟಗೊಂಡಿದ್ದು, ಇದರಲ್ಲಿ ಆರ್‌ಎಮ್‌ಎಸ್‌ಎಸ್ ಇನ್‌ಸ್ಟಿಟ್ಯೂಟ್ ಆಫ್ ನರ್ಸಿಂಗ್ ಸೈನ್ಸಸ್ ಕಾಲೇಜಿನ ವಿದ್ಯಾರ್ಥಿಗಳು ಅತ್ಯುತ್ತಮ ಫಲಿತಾಂಶ ಪಡೆದಿದ್ದಾರೆ.

ವೀರಣ್ಣ ಚಿಗೊಳ್ಳಿ 218 (72.66%) ಅಂಕಗಳೊಂದಿಗೆ ಕಾಲೇಜಿಗೆ ಪ್ರಥಮ ಸ್ಥಾನ, ರಂಜನಾ ರಾಥೋಡ್ 217(72.3%) ದ್ವಿತೀಯ ಸ್ಥಾನ, ಸವಿತಾ 216(72 %) ತೃತೀಯ ಸ್ಥಾನ ಪಡೆದು ಉತ್ತೀರ್ಣರಾಗಿದ್ದಾರೆ. ಒಟ್ಟು 25 ವಿದ್ಯಾರ್ಥಿಗಳಲ್ಲಿ 19 ವಿದ್ಯಾರ್ಥಿಗಳು ಗ್ರೇಡ್ ಬಿ+ ಪಡೆದಿದ್ದು, ಇನ್ನುಳಿದ ವಿದ್ಯಾರ್ಥಿಗಳು ಫಸ್ಟ್ ಕ್ಲಾಸ್ ಮೂಲಕ ಉತ್ತಮ ಫಲಿತಾಂಶ ನೀಡಿ ಒಟ್ಟು ಶೇ.76ರಷ್ಟು ಫಲಿತಾಂಶ ಪಡೆದು ತೇರ್ಗಡೆಯಾಗಿದ್ದಾರೆ. ಸಾಧಕ ವಿದ್ಯಾರ್ಥಿಗಳನ್ನು ಕಾಲೇಜಿನ ಅಧ್ಯಕ್ಷರಾದ ಡಾ. ಎಸ್.ಆರ್. ನಾಗನೂರ, ಗೌರವ ಕಾರ್ಯದರ್ಶಿ ಡಾ. ವೇಮನ್ ಸಾವಕಾರ, ಕಾಲೇಜಿನ ಪ್ರಾಂಶುಪಾಲರಾದ ಬಸಯ್ಯ ಹಿರೇಮಠ ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

## ಹಣ ಬಲ, ತೋಳ್ಬಲದಿಂದ ದೆಹಲಿಯಲ್ಲಿ ಬಿಜೆಪಿ ಗೆದ್ದಿದೆ: ಮುಖ್ಯಮಂತ್ರಿ ಚಂದ್ರು!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ದೆಹಲಿ ಸೋಲನ್ನು ಹೀನಾಯ ಸೋಲು ಎಂದು ನಾನು ಹೇಳುವುದಿಲ್ಲ ಎಂದು ಮುಖ್ಯಮಂತ್ರಿ ಚಂದ್ರು ಅವರು ಹೇಳಿದ್ದಾರೆ.

ರಾಷ್ಟ್ರ ರಾಜಧಾನಿ ದೆಹಲಿಯ ವಿಧಾನಸಭಾ ಚುನಾವಣೆಯಲ್ಲಿ ಎಎಪಿ ಸೋಲು ಕಂಡಿರುವ ಕುರಿತು ನಗರದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಈ ಸೋಲನ್ನ ಹೀನಾಯ ಸೋಲು ಅಂತ ಹೇಳುವುದಿಲ್ಲ ಎಂದಿದ್ದಾರೆ.

ಗೆದ್ದಿರೋರಿಗೆ ಮೊದಲು ಅಭಿನಂದನೆ ಸಲ್ಲಿಸುತ್ತೇನೆ. ನಮ್ಮ ಪಕ್ಷ ಸೋತಿರೋದು ನಿಜ. ಅದರೆ, ಇದು ಸಂಪೂರ್ಣವಾದ ಸೋಲಲ್ಲ. ನಮ್ಮ ಪಕ್ಷದವರನ್ನೂ ಜನ ಗೆಲ್ಲಿಸಿದ್ದಾರೆ. ಜನರಲ್ಲಿ ನಮ್ಮ ಪಕ್ಷದ ಮೇಲೆ ನಂಬಿಕೆ ಇದೆ ಎಂದಿದ್ದಾರೆ. ಬಿಜೆಪಿ ಇಡೀ ಸರ್ಕಾರವೇ ದೆಹಲಿಯ ಚುನಾವಣೆಯಲ್ಲಿ ನಿಂತಿತ್ತು. ಜೊತೆಗೆ ಕೇಂದ್ರ ಸರ್ಕಾರ ತನ್ನ ಅಧೀನದಲ್ಲಿರೋ ಸಂಸ್ಥೆಗಳನ್ನ ಬಳಸಿಕೊಂಡು ನಮ್ಮ ಪಕ್ಷವನ್ನ ಹೇಗಾದ್ರು ಮಾಡಿ ನಿರ್ನಾಮ ಮಾಡಬೇಕು ಅಂತ ಪಣ ತೊಟ್ಟಿದ್ದರು. ಐಟಿ, ಇಡಿ, ಚುನಾವಣಾ ಆಯೋಗವನ್ನ ಬಳಿಸಿಕೊಂಡರು ಎಂದು ಆರೋಪಿಸಿದ್ದಾರೆ.

ಹಣ ಬಲ, ತೋಳ್ಬಲದಿಂದ ಬಿಜೆಪಿ ಗೆದ್ದಿದೆ. ಗೆದ್ದ ಪಕ್ಷ ಜನರಿಗೆ ನೀಡಿರುವ ಭರವಸೆಯನ್ನ ಈಡೇರಿಸಬೇಕು. ಅಭಿವೃದ್ಧಿ ಕಾರ್ಯಗಳನ್ನ ಮಾಡಬೇಕು. ಸೋಲನ್ನು ನಾವು ಸ್ವೀಕಾರ ಮಾಡುತ್ತೇವೆ ಎಂದು ಎಂದು ತಿಳಿಸಿದ್ದಾರೆ.


### ಆಪ್ ಭ್ರಷ್ಟಾಚಾರದಿಂದ ಜನ ರೋಸಿ ಹೋಗಿದ್ದರು!

# ಪ್ರಧಾನಿ ನರೇಂದ್ರ ಮೋದಿಯವರ ಅಭಿವೃದ್ಧಿ ಆಡಳಿತ ನೋಡಿ ಜನ ಬಿಜೆಪಿ ಗೆಲ್ಲಿಸಿದ್ದಾರೆ: ಬಸವರಾಜ ಬೊಮ್ಮಾಯಿ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ದೆಹಲಿಯಲ್ಲಿ ಆಮ್ ಆದ್ಮಿ ಪಕ್ಷದ ಆಡಳಿತ ವೈಖರಿ, ಭ್ರಷ್ಟಾಚಾರ ನೋಡಿ ಜನ ರೋಸಿ ಹೋಗಿ, ಪ್ರಧಾನಿ ನರೇಂದ್ರ ಮೋದಿಯವರ ಅಭಿವೃದ್ಧಿ ಆಡಳಿತ ನೋಡಿ ಬಿಜೆಪಿಗೆ ದೊಡ್ಡ ಪ್ರಮಾಣದ ಬೆಂಬಲ ನೀಡಿದ್ದಾರೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ದೆಹಲಿ ಚುನಾವಣೆ ಫಲಿತಾಂಶದ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ದೆಹಲಿಯಲ್ಲಿ ಮೂವತ್ತು ವರ್ಷದ ನಂತರ ಬಿಜೆಪಿ ಅಧಿಕಾರಕ್ಕೆ ಬಂದಿದೆ. ಅಣ್ಣಾ ಹಜಾರೆ ನೇತೃತ್ವದ ಭ್ರಷ್ಟಾಚಾರ ವಿರೋಧಿ ಆಂದೋಲನಕ್ಕೆ ಬೆಂಬಲಿಸಿ ದೆಹಲಿ ಜನರು ಆಪ್ ಗೆ ಬೆಂಬಲಿಸಿದ್ದರು. ಆದರೆ, ಅವರ ಆಡಳಿತ ವೈಖರಿ ಭ್ರಷ್ಟಾಚಾರ ನೋಡಿ ಜನ ರೋಸಿ ಹೋಗಿದ್ದಾರೆ. ಇನ್ನೊಂದೆಡೆ ದೇಶದೆಲ್ಲೆಡೆ ಪ್ರಧಾನಿ ನರೇಂದ್ರ ಮೋದಿಯವರ ಅಭಿವೃದ್ಧಿ ಆಡಳಿತ ನೋಡಿ ಜನರು ಬಿಜೆಪಿಗೆ ದೊಡ್ಡ ಪ್ರಮಾಣದ ಬೆಂಬಲ ನೀಡಿದ್ದಾರೆ. ಆಪ್ ಪ್ರತಿಯೊಂದರಲ್ಲೂ ಸುಳ್ಳು ಹೇಳುವುದು, ಹಲವಾರು ಸಚಿವರು



ಭ್ರಷ್ಟಾಚಾರದಲ್ಲಿ ತೊಡಗಿದ್ದು, ತಾವು ಮಾಡದಿರುವ ಕೆಲಸಕ್ಕೆ ಬೇರೆಯವರನ್ನು ದೂಷಿಸುತ್ತಿದ್ದರು. ರಸ್ತೆ, ಕುಡಿಯುವ ನೀರು ಕೊಡಲು ಆಗಿಲ್ಲ. ಆಯುಷ್ಮಾನ್ ಯೋಜನೆ ಜಾರಿಗೊಳಿಸದಿರುವುದು ಬಡವರಿಗೆ ಬೇಸರ ತರಿಸಿದೆ ಎಂದು ಹೇಳಿದರು.

ಕಾಂಗ್ರೆಸ್ ಬರೀ ಘೋಷಣೆ ಮೂಲಕ ಅಧಿಕಾರ ನಡೆಸಲು ಸಾಧ್ಯವಿಲ್ಲ. ಈಗ 21ಶತಮಾನದಲ್ಲಿ ಯುವಕರು ಎಲ್ಲವನ್ನೂ ಗಮನಿಸುತ್ತಾರೆ. ಕಾಂಗ್ರೆಸ್ ಕೇವಲ ಘೋಷಣೆ ಮಾಡುವುದರಿಂದ ಜನರ ಮನಸ್ಸು ಗೆಲ್ಲಲು ಸಾಧ್ಯವಿಲ್ಲ. ಕಾಂಗ್ರೆಸ್ ಸಾಮಾನ್ಯರ ಭಾವನೆ ಅರ್ಥ ಮಾಡಿಕೊಳ್ಳಬೇಕು.

ದೆಹಲಿ ಒಂದು ನಗರದ ರಾಜ್ಯ, ಹೊರ ವಲಯದಲ್ಲಿರುವ ರೈತರು, ಹರಿಯಾಣದ ಜಾಟರು, ಪಂಜಾಬಿನ ಜನರು, ಉತ್ತರ ಪ್ರದೇಶ, ಬಿಹಾರದಿಂದ ಬಂದಿರುವ ದುಡಿಯುವ ವರ್ಗ, ಹಲವಾರು ಅಲ್ಪ ಸಂಖ್ಯಾತ ಕ್ಷೇತ್ರದಲ್ಲಿ ಬಿಜೆಪಿ ಗೆದ್ದಿದೆ. ರಾಷ್ಟ್ರೀಯತೆ ನಂಬಿರುವ ಅಲ್ಪ ಸಂಖ್ಯಾತರು ಬಿಜೆಪಿಗೆ ಬೆಂಬಲ ಸೂಚಿಸಿದ್ದಾರೆ ಎಂದು ಹೇಳಿದರು.

ಈ ಚುನಾವಣೆಯ ಒಟ್ಟು ಪರಿಣಾಮ ಹರಿಯಾಣ ಮಹಾರಾಷ್ಟ್ರ, ದೆಹಲಿ ಚುನಾವಣೆ ಫಲಿತಾಂಶದ ನಂತರ ಬಿಜೆಪಿಯನ್ನು ಶಕ್ತಿಯುತವಾಗಿ ಮಾಡಿರುವುದು, ಇಂಡಿ ಒಕ್ಕೂಟದಲ್ಲಿ ಇನ್ನಷ್ಟು ಗೊಂದಲ ಸೃಷ್ಟಿಯಾಗಲಿದೆ. ಆಪ್ ನವರು ತಮ್ಮನ್ನು ಸೋಲಿಸಲು ಕಾಂಗ್ರೆಸ್ ಪ್ರಯತ್ನ ಪಟ್ಟಿತ್ತು ಅಂತ ಮಾತನಾಡುತ್ತಿದ್ದಾರೆ. ಇದನ್ನು ನೋಡಿದರೆ ಇಂಡಿ ಒಕ್ಕೂಟದಲ್ಲಿ ಇನ್ನಷ್ಟು ಗೊಂದಲ ಸೃಷ್ಟಿಯಾಗುತ್ತದೆ ಬೊಮ್ಮಾಯಿ ಹೇಳಿದರು.

### ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಗಾಗಿ ಶಾಲಾ ಮುಖ್ಯಸ್ಥರ, ಮುಖ್ಯೋಪಾಧ್ಯಾಯರ ಸಭೆ

# ಎಲ್ಲಾ ವಿದ್ಯಾರ್ಥಿಗಳನ್ನು ಪರೀಕ್ಷೆಗೆ ಸಿದ್ಧಗೊಳಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

28ಕ್ಕಿಂತ ಕಡಿಮೆ ಅಂಕ ಪಡೆಯುವ ಮಕ್ಕಳನ್ನು ನಾವು ವೈಯಕ್ತಿಕವಾಗಿ ಕಾಳಜಿ ಮಾಡಿ ಪರೀಕ್ಷೆಗೆ ಸಿದ್ಧಗೊಳಿಸಬೇಕು. ಈ ಮಕ್ಕಳಿಗೆ ಜಿಲ್ಲಾ ಪಂಚಾಯತ ವತಿಯಿಂದ ಪಾಸಿಂಗ್ ಪ್ಯಾಕೇಜ್ ನೀಡುತ್ತಿದ್ದು, ಅದರ ಸದುಪಯೋಗವನ್ನು ಶಿಕ್ಷಕರು ಮತ್ತು ಮಕ್ಕಳು ಪಡೆಯಬೇಕು. ಅಲ್ಲದೆ ಉಳಿದಿರುವ 30ರಿಂದ 40 ದಿನಗಳನ್ನು ವಿದ್ಯಾರ್ಥಿಗಳಿಗೆ ಪುನರ್ ಮನನ ಮಾಡಲು ಉಪಯೋಗಿಸಿಕೊಳ್ಳಬೇಕು. ಯಾವುದೇ ಕಾರಣಕ್ಕೂ ಮಕ್ಕಳು ಶಾಲೆಯಿಂದ ಹೊರಗುಳಿಯದಂತೆ ಮುಖ್ಯೋಪಾಧ್ಯಾಯರು ಕ್ರಮ ವಹಿಸ ಬೇಕು ಎಂದು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಸೂಚಿಸಿದರು.



ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆ ನಿಮಿತ್ತ ಹಮ್ಮಿಕೊಂಡಿದ್ದ ಗದಗ ಜಿಲ್ಲೆಯ ಸರ್ಕಾರಿ, ಅನುದಾನಿತ ಪ್ರೌಢಶಾಲೆಗಳ ಮುಖ್ಯೋಪಾಧ್ಯಾಯರ ಹಾಗೂ ವಸತಿ ಶಾಲೆಗಳ ಮುಖ್ಯಸ್ಥರ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಲಾಖೆಯ ಉಪ ನಿರ್ದೇಶಕ (ಆಡಳಿತ) ಆರ್.ಎಸ್. ಬುರಡಿ ಮಾತನಾಡುತ್ತಾ ಯಾವ ಶಾಲೆಗಳಲ್ಲಿ ಓದುವ ಕೋಣೆ ಮಾಡಲು ಸಾಧ್ಯವೋ ಅಲ್ಲಿ ವಿದ್ಯಾರ್ಥಿಗಳಿಗೆ ಅಧ್ಯಯನಕ್ಕೆ ಅನುಕೂಲ ಮಾಡಿಕೊಡಬೇಕು. ಬೆಳಗಿನ ಅವಧಿಯಲ್ಲಿ ವಿದ್ಯಾರ್ಥಿಗಳ ಮನಸ್ಸು ಓದಿನ ಕಡೆ ಬೇಗನೆ ಏಕಾಗ್ರತೆಗೊಳ್ಳುವುದರಿಂದ ಎಂಟು ಗಂಟೆಗೆ ಶಾಲೆಯಲ್ಲಿ ಓದುವ ವ್ಯವಸ್ಥೆಯನ್ನು ಮಾಡಿಕೊಡಬೇಕು ಎಂದರು.

ಸಾಯಂಕಾಲ ವಿದ್ಯಾರ್ಥಿಗಳಿಗೆ ತಂತ್ರಜ್ಞಾನ ಆಧಾರಿತ 'ಫನ್ ವಿಥ್ ಲರ್ನ್', ಡಿಎಸ್‌ಇಆರ್‌ಟಿ ವತಿಯಿಂದ ನಡೆದ ಸಂವೇಗ ತರಬೇತಿಗಳನ್ನು ಆಯೋಜಿಸುವ ಮೂಲಕ ಕಲಿಕೆಗೆ ಅವಕಾಶ ಮಾಡಿಕೊಡಬೇಕು. ಈಗಾಗಲೇ ಕಚೇರಿಯಿಂದ ಸರಳ ಹಾಗೂ ಬಹುಮುಖ್ಯ ಸಾಮರ್ಥ್ಯ ಆಧಾರಿತ ನಮೂನೆಗಳನ್ನು ನೀಡಿದ್ದು, ವಿದ್ಯಾರ್ಥಿಗಳು ಯಾವ ಅಂಶಗಳಲ್ಲಿ ಕಲಿಕೆ ಸಾಧಿಸಿದ್ದಾರೆ ಹಾಗೂ ಸಾಧಿಸಿರುವುದಿಲ್ಲ ಎಂಬ ಪಟ್ಟಿಯ ಆಧಾರದ ಮೇಲೆ ಮಕ್ಕಳಿಗೆ ಮಾರ್ಗದರ್ಶನ ಮಾಡಬೇಕು. ಮುಂದಿನ ವಾರದಲ್ಲಿ ಸ್ಕೋರರ್ ವಿದ್ಯಾರ್ಥಿಗಳಿಗಾಗಿ ವಿಶೇಷ ಕಾರ್ಯಾಗಾರ, ಮನೆ ಭೇಟಿ ಕಾರ್ಯಕ್ರಮ, ಓದಿನ ಮನೆ, ಶಿಕ್ಷಕರಿಗೆ ಹಾಗೂ ವಿದ್ಯಾರ್ಥಿಗಳಿಗಾಗಿ ರಾಜ್ಯಮಟ್ಟದ ಸಂಪನ್ಮೂಲ ವ್ಯಕ್ತಿಗಳೊಂದಿಗೆ ಗೂಗಲ್ ಮೀಟ್ ಸಹಾಯದಿಂದ ಚರ್ಚೆ ಸಂವಾದ ನಡೆಸಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಡಯಟ್ ಪ್ರಾಂಶುಪಾಲ ಜಿ.ಎಲ್. ಬಾರಾಟಕ್ಕೆ, ಡಿವೈಪಿಸಿ ಎಂ.ಹೆಚ್. ಕಂಬಳಿ, ಜಿಲ್ಲಾ ಎಸ್‌ಎಸ್‌ಎಲ್‌ಸಿ ನೋಡಲ್ ಅಧಿಕಾರಿಗಳಾದ ಎಚ್.ಬಿ. ರಡ್ಡೇರ, ಪಿ.ಎಂ ಪೋಷಣ ಅಭಿಯಾನದ ಸಹಾಯಕ ನಿರ್ದೇಶಕರಾದ ಶಂಕರ್ ಹಡಗಲಿ, ಶಾಲಾ ದತ್ತು ಅಧಿಕಾರಿಗಳು, ವಿಷಯ ಪರಿವೀಕ್ಷಕರು, ಎಪಿಸಿಓ, ಎಲ್ಲ ತಾಲೂಕಿನ ಎಸ್‌ಎಸ್‌ಎಲ್‌ಸಿ ನೋಡಲ್ ಅಧಿಕಾರಿಗಳು,ಜಿಲ್ಲೆಯ ಎಲ್ಲಾ ಪ್ರೌಢಶಾಲೆಗಳ ಮುಖ್ಯ ಶಿಕ್ಷಕರು ಹಾಜರಿದ್ದರು.

ಪರೀಕ್ಷೆ ದಿನದವರೆಗೂ ಮಕ್ಕಳು ಶಾಲೆಯಲ್ಲಿ ಇರುವಂತೆ ನೋಡಿಕೊಳ್ಳಬೇಕು. ರಾಜ್ಯಮಟ್ಟದ ಪೂರ್ವಸಿದ್ಧತಾ ಪರೀಕ್ಷೆಯು ವಾರ್ಷಿಕ ಪರೀಕ್ಷೆಯ ಮಾದರಿಯಲ್ಲಿ ಆಯಾ ಪರೀಕ್ಷಾ ಕೇಂದ್ರಗಳಲ್ಲಿ ನಡೆಸಲು ಚಿಂತನೆ ನಡೆಸಿದೆ. ಜೊತೆಗೆ ಉತ್ತರ ಪತ್ರಿಕೆಗಳ ಮೌಲ್ಯಮಾಪನವನ್ನು ಪಕ್ಕದ ಪ್ರೌಢಶಾಲೆಗಳ ಶಿಕ್ಷಕರಿಂದ ಮಾಡಿಸಲಾಗುವುದು. ಪಾಲಕ ಪೋಷಕರ, ತಾಯಂದಿರ ಸಭೆಯನ್ನು ಆಯೋಜಿಸಿ ಮಗುವಿನ ಅಭ್ಯಾಸಕ್ಕಾಗಿ ಕಾಳಜಿ ವಹಿಸುವಂತೆ ಕ್ರಮವಹಿಸಬೇಕು. ಜೊತೆಗೆ ಪರೀಕ್ಷಾ ಪದ್ಧತಿ, ಅಧ್ಯಯನ ಕ್ರಮದ ಜಾಗೃತಿ ಮೂಡಿಸಲು ತಂದೆ-ತಾಯಿಯ ಫೋನ್ ಸಂಖ್ಯೆಗಳಿಗೆ ಜಿ.ಪಂ ವತಿಯಿಂದ ಕರೆ ಮಾಡಿ ಜಾಗೃತಿ ಮೂಡಿಸಲಾಗುವುದು ಎಂದು ಜಿ.ಪಂ ಸಿಇಓ ಭರತ್ ಎಸ್ ತಿಳಿಸಿದರು.

### ದೆಹಲಿ ಗದ್ದುಗೆ ವಶಪಡಿಸಿಕೊಂಡ ಬಿಜೆಪಿ

# ಕಾರ್ಯಕರ್ತರ ವಿಜಯೋತ್ಸವ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೇಶದ ರಾಜಧಾನಿ ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಬಹುವರ್ಷಗಳ ನಂತರ ಬಿಜೆಪಿ ಅಭೂತಪೂರ್ವ ಗೆಲವು ದಾಖಲಿಸುತ್ತಿದ್ದಂತೆ ಪಟ್ಟಣದಲ್ಲಿ ಬಿಜೆಪಿ ಕಾರ್ಯಕರ್ತರ ಸಂಭ್ರಮ ಮುಗಿಲು ಮುಟ್ಟಿತ್ತು. ಶನಿವಾರ ನೂರಾರು ಕಾರ್ಯಕರ್ತರು ಪಟ್ಟಣದ ಪ್ರಮುಖ ಸ್ಥಳಗಳಲ್ಲಿ ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾ ಖಜಾಂಚಿ ನಾಗರಾಜ ಕುಲಕರ್ಣಿ, ಹಿರಿಯ ಮುಖಂಡ ಪೂರ್ಣಾಜಿ ಖರಾಟೆ, ನಗರ ಘಟಕದ ಅಧ್ಯಕ್ಷ ನವೀನ ಬೆಳ್ಳಟ್ಟಿ ಮತ್ತಿತರರು ಮಾತನಾಡಿ, ದೇಶದ ರಾಜಧಾನಿ ದೆಹಲಿಯಲ್ಲಿ ಎಲ್ಲ ಪಕ್ಷಗಳನ್ನು ತಿರಸ್ಕರಿದ್ದು, ವಿರೋಧ ಪಕ್ಷಗಳ ಸುಳ್ಳು ಭರವಸೆಗಳಿಗೆ, ಗ್ಯಾರಂಟಿಗಳಿಗೆ ಮತದಾರರು ತಕ್ಕ ಉತ್ತರ ನೀಡಿದ್ದಾರೆ. 27 ವರ್ಷಗಳ ನಂತರ ಬಿಜೆಪಿ ದೆಹಲಿ ಗದ್ದುಗೆ ಅಲಂಕರಿಸಿದ್ದು, ದೇಶದ ಪ್ರಗತಿಗೆ ಭಾರತೀಯ ಜನತಾ ಪಾರ್ಟಿ ಅವಶ್ಯ ಎನ್ನುವದನ್ನು ಜನ ನಂಬಿದ್ದಾರೆ. ಪ್ರಧಾನಿ ನರೇಂದ್ರ ಮೋದಿಯವರಲ್ಲಿ ಸಂಪೂರ್ಣ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಇದೊಂದು ಐತಿಹಾಸಿಕ ಗೆಲುವಾಗಿದೆ ಎಂದರು.



ವಿಜಯೋತ್ಸವದಲ್ಲಿ ತಾಲೂಕಾ ಯುವ ಮೋರ್ಚಾ ಅಧ್ಯಕ್ಷ ಬಸವರಾಜ ಚಕ್ರಸಾಲಿ, ಶಿರಹಟ್ಟಿ ಮಂಡಳದ ಪ್ರ.ಕಾರ್ಯದರ್ಶಿ ಅನಿಲಕುಮಾರ ಮುಳುಗುಂದ, ಸೋಮೇಶ ಉಪನಾಳ, ಮಂಜುನಗೌಡ ಕೆಂಚನಗೌಡ್ರ, ಗಂಗಾಧರ ಮೆಣಸಿನಕಾಯಿ, ವಿಜಯ ಕುಂಬಾರ, ಪ್ರವೀಣ ಬೋಮಲೆ, ಶಕ್ತಿ ಕತ್ತಿ, ನವೀನ ಹಿರೇಮಠ, ರಾಮು ಪೂಜಾರ, ಶಾಂತವೀರಯ್ಯ ಮಠಪತಿ, ಮಂಜುನಾಥ ಬಸಾಪುರ, ನವೀನ ಕುಂಬಾರ, ವೀರೇಶ ಸಾಸಲವಾಡ, ಚಿನ್ನು ಹಾಳದೋಟದ, ಚಂದ್ರು ಲಮಾಣಿ, ರಾಜಶೇಖರ ಶಿಗ್ಲಿಮಠ, ಆಕಾಶ ಸೌದತ್ತಿ, ಉಳವೇಶಗೌಡ ಪಾಟೀಲ್ ಸೇರಿದಂತೆ ನೂರಾರು ಕಾರ್ಯಕರ್ತರು ಹಾಜರಿದ್ದರು.

## ಫೆ.10ರಿಂದ ಗ್ರಾಮ ಆಡಳಿತ ಅಧಿಕಾರಿಗಳಿಂದ ಅನಿರ್ದಿಷ್ಟಾವಧಿ ಮುಷ್ಕರ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ಸಮಸ್ಯೆ ಮತ್ತು ಬೇಡಿಕೆಗಳ ಈಡೇರಿಕೆಗಾಗಿ ರಾಜ್ಯಾದ್ಯಂತ ಕೆಲಸ ಸ್ಥಗಿತಗೊಳಿಸಿ ಫೆ.10ರಿಂದ 2ನೇ ಹಂತದ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ಗ್ರಾಮ ಆಡಳಿದ ಸಂಘವು ನಿರ್ಧರಿಸಿದ್ದು, ತಮ್ಮ ಅಗತ್ಯವಾದ ಬೇಡಿಕೆಯನ್ನು ಸರ್ಕಾರ ಈಡೇರಿಸಬೇಕು ಎಂದು ಒತ್ತಾಯಿಸಿ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿ ಹಾಗೂ ಕಂದಾಯ ಸಚಿವರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಗ್ರಾಮ ಆಡಳಿದ ಅಧಿಕಾರಿಗಳ ಸಂಘದ ಜಿಲ್ಲಾ ಅಧ್ಯಕ್ಷರು ಅರುಣಗೌಡ ಬ ಮಂಟೂರ್, ಈರಣ್ಣ ಕಳಸನ್ನವರ, ಯೋಗೇಶ್ ಬಡಿಗೇರ, ಜಾಫರ್ ಹವಾಲ್ದಾರ, ಗಿರೀಶ್ ಸಜ್ಜನ, ಮೋಹನ ಕದಡಿ, ಸಂಗಮೇಶ್ ಕಡಗದ, ಮಹೇಶ ಪೋಲಿಸ್ ಪಾಟೀಲ, ಬುಡ್ನೆಸಾಬ ಹಮ್ಮಗಿ, ಕಿರಣ ಓಲೇಕಾರ, ಬಸನಗೌಡ ದೇಸಾಯಿ ಗೌಡ್ರು, ಬಸ್ಮೇ, ಕುಬೇರ ದೊಡ್ಡಮನಿ, ಪರಸಪ್ಪ ಗಾಡಿ ಸೇರಿದಂತೆ ಗ್ರಾಮ ಆಡಳಿತ ಅಧಿಕಾರಿಗಳು ಹಾಜರಿದ್ದರು.

### ಚಿಕೇನಕೊಪ್ಪ ಚನ್ನವೀರಶರಣರ 30ನೇ ಪುಣ್ಯಸ್ಮರಣೋತ್ಸವ, ಜಾತ್ರಾ ಮಹೋತ್ಸವ

# ಶ್ರೀ ಶರಣರ ಬೆಳ್ಳಿಮೂರ್ತಿ ಉತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಸುಕ್ಷೇತ್ರ ಬಳಗಾನೂರಿನ ಚಿಕೇನಕೊಪ್ಪದ ಚನ್ನವೀರಶರಣರ ಮಠದಲ್ಲಿ ಚನ್ನವೀರಶರಣರ 30ನೇ ಪುಣ್ಯಸ್ಮರಣೋತ್ಸವ-ಜಾತ್ರಾ ಮಹೋತ್ಸವದ ಅಂಗವಾಗಿ ಶರಣರ ಬೆಳ್ಳಿಮೂರ್ತಿ ಉತ್ಸವ, ಕಡುಬಿನ ಕಾಳಗ, ಹಾಸ್ಯ ಸಂಜೆ, ಸಂಗೀತ ಸುಧೆ ಕಾರ್ಯಕ್ರಮಗಳು ಜರುಗಿದವು. ಶ್ರೀ ಶಿವಶಾಂತವೀರ ಶರಣರು ಸನ್ನಿಧಾನ ವಹಿಸಿ ಶುಭ ಸಂದೇಶ ನೀಡಿದರು.



ಖ್ಯಾತ ಹಾಸ್ಯ ಕಲಾವಿದರಾದ ಗಂಗಾವತಿ ಪ್ರಾಣೇಶ್, ಗಂಗಾವತಿ ನರಸಿಂಹ ಜೋಶಿ ಹಾಗೂ ಬಸವರಾಜ ಮಾಮನಿ ಇವರಿಂದ ಜರುಗಿದ ಹಾಸ್ಯ ಸಂಜೆ ಪ್ರೇಕ್ಷಕರನ್ನು ನಗೆಗಡಲಿನಲ್ಲಿ ತೇಲಿಸಿದರು. ಶ್ರೀ ಚನ್ನವೀರಶರಣರ ಬೆಳ್ಳಿಮೂರ್ತಿ ಉತ್ಸವವು ಗ್ರಾಮದಲ್ಲಿ ಸಕಲ ವಾದ್ಯ ವೈಭವಗಳೊಂದಿಗೆ ಜರುಗಿತು. ಶ್ರೀಮಠದಲ್ಲಿ ಕಡುಬಿನ ಕಾಳಗ ಜರುಗಿತು. ಆಕಾಶವಾಣಿ ಹಾಗೂ ದೂರದರ್ಶನ ಕಲಾವಿದ ಕೆ. ದೊಡ್ಡಬಸವ ಗವಾಯಿಯವರಿಂದ ಸಂಗೀತ ಸುಧೆ ಜರುಗಿತು.

ಇದೇ ಸಂದರ್ಭದಲ್ಲಿ ಗದಗ ಗ್ರಾಮೀಣ ಪೊಲೀಸ್ ಠಾಣೆಯ ವೃತ್ತಾಧಿಕಾರಿ ಸಿದ್ಧರಾಮೇಶ್ವರ ಗಡೇದ ಹಾಗೂ ಪೊಲೀಸ್ ಪೇದೆ ಬಸವರಾಜ ಗುಡ್ನಾನೂರ ಅವರಿಗೆ 'ಶರಣಶ್ರೀ' ಪ್ರಶಸ್ತಿ ನೀಡಿ ಗೌರವಿಸಲಾಯಿತು. ಹುಬ್ಬಳ್ಳಿ ನವನಗರದ ಚನ್ನವೀರಶರಣರ ಅಂಧರ ಕಲ್ಯಾಣ ಆಶ್ರಮದ ಸುನೀಲ ಹಾಗೂ ಮಣಿಕಮಠ ವಿದ್ಯಾರ್ಥಿಗಳಿಂದ ಯೋಗ ಪ್ರದರ್ಶನ ಜರುಗಿತು. ವಿ.ಎಸ್. ಹಿರೇಮಠ, ವಿ.ಬಿ. ಪೊಲೀಸಪಾಟೀಲ, ಶರಣಪ್ಪ ಅಂಗಡಿ ಮೊದಲಾದವರು ಉಪಸ್ಥಿತರಿದ್ದರು.

ಶಿವಲಿಂಗಶಾಸ್ತ್ರಿ ಸಿದ್ದಾಪೂರ ಕಾರ್ಯಕ್ರಮ ನಿರೂಪಿಸಿದರು. ಎಸ್.ಎಸ್. ಪುರಾಣಿಕಮಠ ಶರಣಶ್ರೀ ಪ್ರಶಸ್ತಿ ವಾಚನ ಮಾಡಿದರು. ಶಿವು ಗಣಾಚಾರಿ ವಂದಿಸಿದರು.

# ಪೋಕ್ಸೋ ಕಾಯಿದೆಯಿಂದ ಮಕ್ಕಳಿಗೆ ರಕ್ಷಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಪೋಕ್ಸೋ ಕಾಯಿದೆಯು 18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಎಲ್ಲ ಮಕ್ಕಳಿಗೆ ಅನ್ವಯವಾಗುತ್ತದೆ. ಇದು ಹುಡುಗ ಹಾಗೂ ಹುಡುಗಿ, ಇಬ್ಬರಿಗೂ ರಕ್ಷಣೆ ನೀಡುತ್ತದೆ ಎಂದು ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿ ಅಧ್ಯಕ್ಷ ಶ್ರೀಧರ ಸುಲ್ತಾನಪೂರ ಹೇಳಿದರು.

ಅವರು ಶನಿವಾರ ರೋಟರಿ ಕ್ಲಬ್ ಗದಗ-ಬೆಟಗೇರಿಯಿಂದ ತಾಲೂಕಿನ ಮಲ್ಲಸಮುದ್ರದ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಹಾಗೂ ಉರ್ದು ಶಾಲಾ ಮಕ್ಕಳಿಗಾಗಿ ಏರ್ಪಡಿಸಿದ್ದ ಪೋಕ್ಸೋ ಕಾಯಿದೆ ಜಾಗೃತಿ, ಆರೋಗ್ಯ ರಕ್ಷಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮಕ್ಕಳು ತಮ್ಮತನವನ್ನು ತಿಳಿಯಬೇಕು. ಯಾವುದು ಒಳ್ಳೆಯದು-ಕೆಟ್ಟದ್ದು ಎಂಬುದನ್ನು ಅರಿತುಕೊಂಡು ಜಾಗೃತರಾಗಬೇಕು ಎಂದರು.

ಗದಗ-ಬೆಟಗೇರಿ ರೋಟರಿ ಕ್ಲಬ್ ಅಸಿಸ್ಟಂಟ್ ಗವರ್ನರ್ ಶಿವಾಚಾರ್ಯ ಹೊಸಳ್ಳಿಮಠ ಮಾತನಾಡಿ, ಮಕ್ಕಳು ತಮ್ಮ ಬಾಲ್ಯವನ್ನು ಖುಷಿಯಿಂದ ಕಳೆಯಬೇಕು. ಓದು-ಬರಹದಲ್ಲಿ ಪ್ರಗತಿ ಸಾಧಿಸಬೇಕು ಎಂದರು.

ಅಸುಂಡಿ ಗ್ರಾ.ಪಂ ಅಧ್ಯಕ್ಷ ಅಲ್ತಾಫ ಕಾಗದಗಾರ ಅಧ್ಯಕ್ಷತೆ ವಹಿಸಿ ಮಾತನಾಡಿ, ಸಂಘ-ಸಂಸ್ಥೆಗಳು ಸರ್ಕಾರಿ ಶಾಲೆಯ ಸಬಲೀಕರಣಕ್ಕೆ ಕೈಜೋಡಿಸಿ ವಿದ್ಯಾರ್ಥಿಗಳ ಆರೋಗ್ಯ ಜಾಗೃತಿ ಕಾರ್ಯಕ್ರಮ ಹಮ್ಮಿಕೊಂಡು, ಪೋಕ್ಸೋ ಕಾಯಿದೆ ಕುರಿತು ತಿಳುವಳಿಕೆ ನೀಡುತ್ತಿರುವುದು ಶ್ಲಾಘನೀಯ ಎಂದರು.

ಗದಗ-ಬೆಟಗೇರಿ ರೋಟರಿ ಕ್ಲಬ್ ಅಧ್ಯಕ್ಷ ಡಾ.ರೇವಣಸಿದ್ಧೇಶ್ವರ ಉಪ್ಪಿನ ಮಾತನಾಡಿದರು. ಮೆಡಿಮಿಕ್ಸ್ ಕಂಪನಿಯಿಂದ ಮಕ್ಕಳಿಗೆ ಸೋಪು ವಿತರಿಸಲಾಯಿತು. ಶಾಲಾ ಮೇಲುಸ್ತುವಾರಿ ಸಮಿತಿಯ ಮೊಹಮ್ಮದ್ ಸಾಬ್ ದರಗಾದ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

ಮುಖ್ಯೋಪಾಧ್ಯಾಯ ಗಿರಿಶ ಬಂಡಿಹಾಳ ಸ್ವಾಗತಿಸಿದರು. ಎಸ್. ಎಂ. ಇಟಗಿ ಪ್ರಾಸ್ತಾವಿಕವಾಗಿ ಮಾತತನಾಡಿದರು. ಕೆ.ಟಿ. ಪೂಜಾರ ನಿರೂಪಿಸಿದರು. ಉರ್ದು ಶಾಲೆಯ ಮುಖ್ಯೋಪಾಧ್ಯಾಯೆ ಎಸ್. ಎಂ. ಶೇಖ ವಂದಿಸಿದರು. ಕಾರ್ಯಕ್ರಮದಲ್ಲಿ ಶಾಲಾ ಶಿಕ್ಷಕರು, ಪಾಲಕರು ಹಾಜರಿದ್ದರು.

### ಅಖಿಲ ಭಾರತ ವೀರಶೈವ ಮಹಾಸಭಾದ ಆಜೀವ ಸದಸ್ಯತ್ವ ಅಭಿಯಾನ

# ಜಿಲ್ಲಾ ಘಟಕದ ಕಾರ್ಯಕ್ರಮ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಭಾರತ ವೀರಶೈವ ಮಹಾಸಭಾದ ಕರ್ನಾಟಕ ರಾಜ್ಯ ಘಟಕದ ನೂತನ ಅಧ್ಯಕ್ಷ ಶಂಕರ ಬಿದರಿ ಹಾಗೂ ಉಪಾಧ್ಯಕ್ಷರೂ ಗದಗ ಜಿಲ್ಲಾ ಉಸ್ತುವಾರಿಗಳಾದ ಅಮರೇಗೌಡ ಬಯ್ಯಾಪೂರ ಅವರು ಫೆ. 9ರಂದು ಗದಗ ನಗರಕ್ಕೆ ಆಗಮಿಸಿ ಜಿಲ್ಲಾ ಘಟಕದ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು ಎಂದು ಜಿಲ್ಲಾ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಹೇಳಿದರು.

ಅವರು ನಗರದ ವೀರಶೈವ ಜನರಲ್ ಲೈಬ್ರರಿಯ ಆವರಣದಲ್ಲಿ ಜರುಗಿದ ಮಹಾಸಭಾದ ಜಿಲ್ಲಾ, ತಾಲೂಕಾ ಘಟಕಗಳ ಸರ್ವ ಪದಾಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.




ಫೆ.9ರಂದು ಮಧ್ಯಾಹ್ನ 1-30 ಗಂಟೆಗೆ ಗದಗ ನಗರಕ್ಕೆ ಆಗಮಿಸುವ ರಾಜ್ಯ ಅಧ್ಯಕ್ಷ-ಉಪಾಧ್ಯಕ್ಷರನ್ನು ಬರಮಾಡಿಕೊಳ್ಳಲಾಗುವದು. 2-30 ಗಂಟೆಗೆ ಗದಗ ಜಿಲ್ಲಾ ಮಹಾಸಭಾದ ನಿಯೋಜಿತ ಸಭಾಭವನಕ್ಕೆ (ಕಳಸಾಪೂರ ರಿಂಗ್ ರೋಡ್) ಭೇಟಿ ನೀಡುವರು.

ಮಧ್ಯಾಹ್ನ 3 ಗಂಟೆಗೆ ಗದಗ ಜಿಲ್ಲಾ ಚೇಂಬರ್ ಆಫ್ ಕಾಮರ್ಸ್ ಸಭಾಂಗಣದಲ್ಲಿ ಮಹಾಸಭಾದ ಆಜೀವ ಸದಸ್ಯತ್ವ ಅಭಿಯಾನಕ್ಕೆ ಶಂಕರ ಬಿದರಿ ಅವರು ಚಾಲನೆ ನೀಡಿ ಸಂಘಟನೆಯ ಬಲವರ್ಧನೆಗೆ ಮಾರ್ಗದರ್ಶನ ಮಾಡುವರು.

ಸಮಾರಂಭದ ಸಾನ್ನಿಧ್ಯವನ್ನು ಹೊಸಳ್ಳಿಯ ಬೂದೀಶ್ವರ ಸಂಸ್ಥಾನಮಠದ ಪೂಜ್ಯ ಅಭಿನವ ಬೂದೀಶ್ವರ ಮಹಾಸ್ವಾಮಿಗಳು ವಹಿಸುವರು. ಸಮ್ಮುಖವನ್ನು ಅಬ್ಬಿಗೇರಿಯ ಯಲ್ಲಾಲಿಂಗೇಶ್ವರ ಮಠದ ಪೂಜ್ಯ ಬಸವರಾಜ ಬಸವರಡ್ಡೇರ ವಹಿಸುವರು. ಮುಖ್ಯ ಅತಿಥಿಗಳಾಗಿ ಮಹಾಸಭಾದ ರಾಜ್ಯ ಉಪಾಧ್ಯಕ್ಷ ಅಮರೇಗೌಡ ಬಯ್ಯಾಪೂರ ರಾಜ್ಯ ಕಾರ್ಯಕಾರಿ ಮಂಡಳಿಯ ಸದಸ್ಯ ಸಂಗನಗೌಡ (ಮಿಥುನ್) ಪಾಟೀಲ ಆಗಮಿಸುವರು. ಅತಿಥಿಗಳಾಗಿ ಗದಗ ಜಿಲ್ಲೆಯ ಎಲ್ಲ ತಾಲೂಕಿನ ಅಧ್ಯಕ್ಷರು ಪಾಲ್ಗೊಳ್ಳಲಿದ್ದು, ಅಧ್ಯಕ್ಷತೆಯನ್ನು ಜಿಲ್ಲಾ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ವಹಿಸುವರು ಎಂದರು.

ಸಭಾಭವನ ನಿರ್ಮಾಣ ಕಾರ್ಯ ತೀವ್ರಗೊಳಿಸುವ, ದಾನಿಗಳಿಂದ ದೇಣಿಗೆ ಸಂಗ್ರಹಿಸುವ, ಶಾಸಕರ, ಸಂಸದರ ಅನುದಾನ, ಮಹಾಸಭಾದಿಂದ ಆರ್ಥಿಕ ನೆರವು ಸೇರಿದಂತೆ ಗದಗ ಜಿಲ್ಲೆಯಲ್ಲಿ ಸಂಘಟನೆಯನ್ನು ಇನ್ನಷ್ಟು ಬಲಗೊಳಿಸಲು ಜಿಲ್ಲಾ, ತಾಲೂಕಾ ಪದಾಧಿಕಾರಿಗಳಿಂದ ಬಂದ ಸಲಹೆ-ಸೂಚನೆಗಳನ್ನು ಗಮನದಲ್ಲಿರಿಸಿಕೊಂಡು ಎಲ್ಲರೂ ಒಟ್ಟಾಗಿ ಸಮಾಜಮುಖಿಯಾಗಿ ಕಾರ್ಯ ಮಾಡುವದಾಗಿ ಸಭೆಯಲ್ಲಿ ಉಪಸ್ಥಿತರಿದ್ದವರು ಒಮ್ಮತದ ನಿರ್ಧಾರ ಕೈಗೊಂಡರು ಎಂದು ಶರಣಬಸಪ್ಪ ಗುಡಿಮನಿ ಹೇಳಿದರು.

ರಾಜ್ಯ ಕಾರ್ಯಕಾರಿ ಮಂಡಳಿಯ ಸದಸ್ಯ ಸಂಗನಗೌಡ (ಮಿಥುನ್) ಪಾಟೀಲ ಸಭೆಯಲ್ಲಿ ಉಪಸ್ಥಿತರಿದ್ದು ಸಲಹೆ-ಸೂಚನೆ ನೀಡಿದರು. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮುರುಘರಾಜೇಂದ್ರ ಬಡ್ನಿ ಸ್ವಾಗತಿಸಿದರು. ಚನ್ನವೀರ ಹುಣಶೀಕಟ್ಟಿ ವಂದಿಸಿದರು.

### ಶ್ರೀ ಗುರು ದತ್ತಾತ್ರೇಯ ಉತ್ಸವದ ಚಿಂತನದಲ್ಲಿ ಅರುಣ ಕುಲಕರ್ಣಿ ಅಭಿಮತ

# ಶ್ರೀ ವೀರಪ್ಪಜ್ಜನವರು ಈ ಭಾಗದ ಭಾಗ್ಯವಿಧಾತರು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕೋಡಿಕೊಪ್ಪದಲ್ಲಿ ಜನಿಸಿ ತಮ್ಮ ಹಠಯೋಗದ ಮೂಲಕ ಈ ನಾಡನ್ನೇ ಬೆಳಗಿದ ಶ್ರೀ ವೀರಪ್ಪಜ್ಜನವರು ಕೋಡಿಕೊಪ್ಪ-ನರೇಗಲ್ಲ ಭಾಗದ ಭಾಗ್ಯವಿಧಾತರು. ಅವರ ನಿತ್ಯ ಸ್ಮರಣೆಯಿಂದ ನಮ್ಮ ಜೀವನ ಪಾವನವಾಗುತ್ತದೆ ಎಂದು ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ನಡೆಯುತ್ತಿರುವ ಶ್ರೀ ಗುರು ದತ್ತಾತ್ರೇಯ ಉತ್ಸವದ ಚಿಂತನದಲ್ಲಿ ಅವರು ಮಾತನಾಡಿದರು.

ಶ್ರೀ ವೀರಪ್ಪಜ್ಜನವರು ಹಠಯೋಗಿಯಾಗಿ ತಮ್ಮ ಜೀವನದ ಆಧ್ಯಾತ್ಮಿಕ ಉತ್ತುಂಗಕ್ಕೆ ತಲುಪಿದವರು. ಮೊದಲಿಗೆ ಜನರಿಗೆ ಹುಚ್ಚರಂತೆ ಕಂಡ ಅವರು, ತಮ್ಮ ಪರಶಿವ ತತ್ವದಿಂದ ಮಹಾದೇವನಾಗಿ ಮೆರೆದರು. ಯಾರು ಅವರನ್ನು ಹುಚ್ಚನೆಂದು ದೂರ ಇರಿಸಿದ್ದರೋ ಮುಂದೆ ಅವರೇ ಶ್ರೀ ವೀರಪ್ಪಜ್ಜನವರನ್ನು ಪೂಜಿಸುವಂತಾಯಿತು. ಮಹಾತ್ಮರ ಲೀಲೆಗಳು ನಮಗೆ ಅಷ್ಟು ಸುಲಭವಾಗಿ ಅರ್ಥವಾಗುವುದಿಲ್ಲ. ಅವುಗಳನ್ನು ತಿಳಿದುಕೊಳ್ಳಬೇಕಾದರೆ ನಮ್ಮಲ್ಲೂ ಆಧ್ಯಾತ್ಮದ ಅಂಶ ಸ್ವಲ್ಪವಾದರೂ ಇರಬೇಕಾಗುತ್ತದೆ ಎಂದು ತಿಳಿಸಿದರು.



ಶ್ರೀ ದತ್ತಭಕ್ತ ಮಂಡಳಿಯ ಕಾರ್ಯದರ್ಶಿ ರಘುನಾಥ ಕೊಂಡಿ ಮಾತನಾಡಿ, ಶ್ರೀ ವೀರಪ್ಪಜ್ಜನವರಿಗೆ ದೀಕ್ಷೆ ನೀಡಿದವರು ಇದೇ ನರೇಗಲ್ಲದ ಹನುಮಾನ ಅವಧೂತರು. ಹನುಮಂತಭಟ್ಟ ಗ್ರಾಮಪುರೋಹಿತ ಎನ್ನುವವರು ತಮ್ಮ ಸಾಧನೆಯಿಂದ ಹನುಮಾವಧೂತರಾದರು. ಅವರ ಸಮಾಧಿ ಸ್ಥಳವು ಕುಷ್ಟಗಿಯ ಬಳಿ ಇದ್ದು, ಅಲ್ಲಿ ಈಗಲೂ ಆರಾಧನೆ ನಡೆಯುತ್ತಿದೆ ಎಂದು ತಿಳಿಸಿದರು.

ಈ ವೇಳೆ ಶ್ರೀ ಗುರು ಚರಿತ್ರೆ ಪಾರಾಯಣಕಾರರಾದ ವಿಶ್ವನಾಥಭಟ್ಟ ವೈದ್ಯ, ಶೇಷಗಿರಿ ಕುಲಕರ್ಣಿ, ಎ.ಜಿ. ಕುಲಕರ್ಣಿ, ಎಸ್.ಎಚ್. ಕುಲಕರ್ಣಿ, ಅಜಿತ ಕುಲಕರ್ಣಿ, ಪ್ರಣವ ಕುಲಕರ್ಣಿ, ರಾಮಕೃಷ್ಣ ಸದರಜೋಷಿ, ಕೆ.ಬಿ. ದೇಸಾಯಿ, ಗುರುರಾಜ ಕುಲಕರ್ಣಿ, ಆನಂದ ಕುಲಕರ್ಣಿ, ಮಂಜುನಾಥ ಕುಲಕರ್ಣಿ, ಜಗನ್ನಾಥ ಸೂರಭಟ್ಟನವರ, ಬಾಬುರಾವ ಕಾಳೆ, ಶೋಭಾ ಕುಲಕರ್ಣಿ, ಸೀಮಾ ಕೊಂಡಿ, ಪ್ರಿಯಾ ಕುಲಕರ್ಣಿ, ಸನ್ಮತಿ ಸದರಜೋಷಿ, ಜ್ಯೋತಿ ನಾಡಿಗೇರ, ಜಯಶ್ರೀ ಗ್ರಾಮಪುರೋಹಿತ, ರೂಪಾ ಗ್ರಾಮಪುರೋಹಿತ, ಅರ್ಚನಾ ಕುಲಕರ್ಣಿ, ರೇಣುಕಾ ಗ್ರಾಮಪುರೋಹಿತ, ವಿದ್ಯಾ ಗ್ರಾಮಪುರೋಹಿತ, ಲಕ್ಷ್ಮೀ ಗ್ರಾಮಪುರೋಹಿತ, ಪರಿಮಳಾ ಗ್ರಾಮಪುರೋಹಿತ ಮುಂತಾದವರಿದ್ದರು.

ಸುಖದ ಜೀವನಕ್ಕೆ ಎಂದಿಗೂ ಹಪಹಪಿಸದ ಶ್ರೀ ವೀರಪ್ಪಜ್ಜನವರು ಕಷ್ಟಗಳನ್ನೇ ತಮ್ಮ ಜೀವನದುದ್ದಕ್ಕೂ ಹೊದ್ದುಕೊಂಡು ಬದುಕಿದರು. ನೆರಳನ್ನು ಬಯಸಿದವರಲ್ಲ, ಮಳೆ, ಗಾಳಿ-ಚಳಿಗೆ ಅವರು ಎಂದಿಗೂ ಅಂಜಿದವರಲ್ಲ. ಎಲ್ಲರನ್ನೂ ಈ ಎಲ್ಲದರಿಂದ ರಕ್ಷಿಸಿ ತಾವು ಮಾತ್ರ ಡೋಣಿಕಲ್ಲು ಏರಿಯ ಮೇಲೆ ನಿರ್ಭಾವದಿಂದ ಕುಳಿತ ಮಹಾಂತರಾದರು. ಅವರು ದೇಹ ಬಿಟ್ಟು ಈ ವರ್ಷಕ್ಕೆ ನೂರು ವರ್ಷಗಳಾಗಿದ್ದರಿಂದ ಈ ಸಾರೆ ವೀರಪ್ಪಜ್ಜನವರ ಕಮಿಟಿಯವರು ಶತಮಾನೋತ್ಸವವನ್ನು ವಿಜೃಂಭಣೆಯಿಂದ ಆಚರಿಸಿದರು ಎಂದು ಕುಲಕರ್ಣಿ ಹೇಳಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka